ಸತ್ಯ ಮತ್ತು ಧೈರ್ಯದ ಧ್ವನಿ

ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 133 | ರಾಯಚೂರು Raichur | 04-11-2026 | ಬುಧವಾರ Wednesday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685



ರಾಯಚೂರಿನಿಂದಲೇ ಸಾಮಾಜಿಕ ನ್ಯಾಯ ಸಭೆಗೆ ಚಾಲನೆ: ಎಡಿಜಿಪಿ ಪಿ. ಹರಿಶೇಖರನ್



ರಾಯಚೂರು, ನ.3 (ಕರ್ನಾಟಕ ವಾರ್ತೆ): ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರ ಸಮಸ್ಯೆಗಳನ್ನು ಆಲಿಸಿ, ಅವರಿಗೆ ನ್ಯಾಯ ಒದಗಿಸುವ ಉದ್ದೇಶದಿಂದ ರಾಜ್ಯದ ಪ್ರತಿಯೊಂದು ಜಿಲ್ಲೆಯಲ್ಲಿಯೂ ಸಾಮಾಜಿಕ ನ್ಯಾಯ ಸಭೆಗಳನ್ನು ಆಯೋಜಿಸಲಾಗುವುದು. ಈ ಸಭೆಗಳ ಸರಣಿಯನ್ನು ರಾಯಚೂರು ಜಿಲ್ಲೆಯಿಂದಲೇ ಆರಂಭಿಸಲಾಗಿದೆ ಎಂದು ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಪಿ. ಹರಿಶೇಖರನ್ ಹೇಳಿದರು.

ಮಂಗಳವಾರ ನಗರದ ಅಂಬೇಡ್ಕರ್ ಹಾಗೂ ಡಾ. ಬಾಬು ಜಗಜೀವನ ರಾಮ್ ಸಮುದಾಯ ಭವನದಲ್ಲಿ ಜಿಲ್ಲಾಡಳಿತ, ಪೊಲೀಸ್ ಇಲಾಖೆ, ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದ ಪೊಲೀಸ್ ಠಾಣೆ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಜಿಲ್ಲಾ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಾಮಾಜಿಕ ನ್ಯಾಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಹಿಂದೆ ರಾಯಚೂರು ಜಿಲ್ಲೆಯಲ್ಲಿ ಜಿಲ್ಲಾ ಪೊಲೀಸ್ ಅಧೀಕ್ಷಕರಾಗಿ ಸೇವೆ ಸಲ್ಲಿಸಿರುವುದರಿಂದ ಜಿಲ್ಲೆಯ ಸ್ಥಿತಿಗತಿ ಹಾಗೂ ಇಲ್ಲಿನ ಜನರು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಅರಿವಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯಗಳಿಗೆ ನ್ಯಾಯ ಒದಗಿಸುವುದು ಹಾಗೂ ಅವರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವುದು ಸಾಮಾಜಿಕ ನ್ಯಾಯ ಸಭೆಯ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು.

ಬೆಂಗಳೂರಿನಿಂದ ರಾಯಚೂರಿಗೆ ಆಗಮಿಸಿರುವ ಮುಖ್ಯ ಉದ್ದೇಶವೇ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರು ಎದುರಿಸುತ್ತಿರುವ ಸಮಸ್ಯೆಗಳನ್ನು ಆಲಿಸಿ, ಅವುಗಳಿಗೆ ಸೂಕ್ತ ಪರಿಹಾರ ಕಂಡುಕೊಳ್ಳುವುದಾಗಿದೆ. ಆದ್ದರಿಂದ ಪ್ರತಿಯೊಬ್ಬರಿಗೂ ತಮ್ಮ ಸಮಸ್ಯೆಗಳನ್ನು ಮುಕ್ತವಾಗಿ ಹೇಳಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಮೌಖಿಕವಾಗಿ ಪ್ರಸ್ತಾಪಿಸುವ ಹಾಗೂ ಲಿಖಿತ ರೂಪದಲ್ಲಿ ಸಲ್ಲಿಸುವ ಎಲ್ಲ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಲಾಗುವುದು. ಅವುಗಳಿಗೆ ಸಂಬಂಧಪಟ್ಟ ಇಲಾಖೆಗಳ ಮೂಲಕ ಸೂಕ್ತ ಪರಿಹಾರ ಒದಗಿಸಲು ಖುದ್ದಾಗಿ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ಜಿಲ್ಲಾಧಿಕಾರಿ ಪೂವಿತಾ 2ನೇ ಪುಟಕ್ಕೆ

ಬೊಲೆರೊ ಡಿಕ್ಕಿಗೆ ಮಹಿಳೆ ಸಾವು, ಯುವಕನ ಸ್ಥಿತಿ ಗಂಭೀರ



ಮಸ್ಕಿ, ನ.3: ದ್ವಿಚಕ್ರ ವಾಹನಕ್ಕೆ ಹಿಂಬದಿಯಿಂದ ಬೊಲೆರೊ ವಾಹನ ಡಿಕ್ಕಿ ಹೊಡೆದ ಪರಿಣಾಮ ಮಹಿಳೆಯೊಬ್ಬರು ಸ್ಥಳದಲ್ಲೇ ಮೃತಪಟ್ಟಿದ್ದು, ಯುವಕನೊಬ್ಬ ಗಂಭೀರವಾಗಿ ಗಾಯಗೊಂಡಿರುವ ದುರ್ಘಟನೆ ಪಟ್ಟಣದ ಲಿಂಗಸುಗೂರು ರಸ್ತೆಯಲ್ಲಿ ಸಂಭವಿಸಿದೆ.

ಅಪಘಾತದಲ್ಲಿ ಮೃತಪಟ್ಟ ಮಹಿಳೆಯನ್ನು ಹನುಮಮ್ಮ (45) ಎಂದು ಗುರುತಿಸಲಾಗಿದ್ದು, ಬೈಕ್ ಚಲಾಯಿಸುತ್ತಿದ್ದ ಕುಮಾರ್ (23) ಗಂಭೀರವಾಗಿ ಗಾಯಗೊಂಡಿದ್ದಾರೆ.

ಲಿಂಗಸುಗೂರಿನಿಂದ ಮಸ್ಕಿ ತಾಲೂಕಿನ ಮೂಡಲದಿನ್ನಿ ಗ್ರಾಮದ ಕಡೆಗೆ ಹನುಮಮ್ಮ ಮತ್ತು ಕುಮಾರ್ ದ್ವಿಚಕ್ರ ವಾಹನದಲ್ಲಿ ಪ್ರಯಾಣಿಸುತ್ತಿದ್ದರು. ಈ ವೇಳೆ ಲಿಂಗಸುಗೂರು ರಸ್ತೆಯಲ್ಲಿ ಹಿಂಬದಿಯಿಂದ ಬಂದ ಬೊಲೆರೊ ವಾಹನ ಏಕಾಏಕಿ ಬೈಕ್‌ಗೆ ಡಿಕ್ಕಿ ಹೊಡೆದಿದೆ ಎನ್ನಲಾಗಿದೆ.

ಡಿಕ್ಕಿಯ ತೀವ್ರತೆಗೆ ದ್ವಿಚಕ್ರ ವಾಹನದ ಹಿಂಬದಿ ಕುಳಿತಿದ್ದ ಹನುಮಮ್ಮ ರಸ್ತೆಗೆ ಎಸೆಯಲ್ಪಟ್ಟು ತೀವ್ರ ಗಾಯಗೊಂಡು ಸ್ಥಳದಲ್ಲಿಯೇ ಕೊನೆಯುಸಿರೆಳೆದಿದ್ದಾರೆ. ಬೈಕ್ ಚಲಾಯಿಸುತ್ತಿದ್ದ ಕುಮಾರ್ ಕೂಡ ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ತಕ್ಷಣ ಆಸ್ಪತ್ರೆಗೆ ದಾಖಲಿಸಿ ಪ್ರಾಥಮಿಕ ಚಿಕಿತ್ಸೆ ನೀಡಲಾಗಿದೆ. ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಬಾಗಲಕೋಟೆಯ ಆಸ್ಪತ್ರೆಗೆ ರವಾನಿಸಲಾಗಿದೆ.

ಅಪಘಾತಕ್ಕೆ ಬೊಲೆರೊ ವಾಹನದ ಚಾಲಕನ ಅತಿವೇಗ ಹಾಗೂ ನಿರ್ಲಕ್ಷ್ಯದ ಚಾಲನೆಯೇ ಕಾರಣವಾಗಿರಬಹುದು ಎಂಬ ಆರೋಪ ಕೇಳಿಬಂದಿದೆ. ಘಟನೆಗೆ ಸಂಬಂಧಿಸಿದಂತೆ ಮಸ್ಕಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಅಪಘಾತದ ನಿಖರ ಕಾರಣಗಳ ಕುರಿತು ಪೊಲೀಸರು ತನಿಖೆ ಕೈಗೊಂಡಿದ್ದಾರೆ.

ಅಪಘಾತದಲ್ಲಿ ಮಹಿಳೆ ಸ್ಥಳದಲ್ಲೇ ಮೃತಪಟ್ಟಿರುವುದು ದುರಂತವಾಗಿದ್ದು, ಗಾಯಾಳು ಯುವಕನಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರಿದಿದೆ.

ಕುಡಿಯುವ ನೀರಿನ ಕೆರೆ ಭರ್ತಿಗೆ ಅಗತ್ಯ ಕ್ರಮ ಕೈಗೊಳ್ಳಿ: ಎನ್.ಎಸ್. ಬೋಸರಾಜು ಸೂಚನೆ



ಮಾನ್ವಿ: ಪಟ್ಟಣದ ಸುಮಾರು 50 ಸಾವಿರ ಜನರಿಗೆ ಕುಡಿಯುವ ನೀರು ಪೂರೈಸುವ ಪುರಸಭೆಯ ಕೆರೆಯಲ್ಲಿ ನೀರಿನ ಸಂಗ್ರಹ ಕಡಿಮೆಯಾಗಿದ್ದು, ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಮುನ್ನೆಚ್ಚರಿಕೆ ವಹಿಸಿ ಕೆರೆಯನ್ನು ಸಂಪೂರ್ಣವಾಗಿ ತುಂಬಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಅಧಿಕಾರಿಗಳಿಗೆ ಸೂಚಿಸಿದರು.

ತಾಲೂಕಿನ ರಬ್ಬಣಕಲ್ ಗ್ರಾಮದ ಸಮೀಪದಲ್ಲಿರುವ ಮಾನ್ವಿ ಪುರಸಭೆಯ ಕುಡಿಯುವ ನೀರಿನ ಕೆರೆಗೆ ಭೇಟಿ ನೀಡಿ ನೀರಿನ ಸಂಗ್ರಹ ಹಾಗೂ ಪೂರೈಕೆ ವ್ಯವಸ್ಥೆಯನ್ನು ಪರಿಶೀಲಿಸಿದ ಅವರು, ಸಂಬಂಧಪಟ್ಟ ಅಧಿಕಾರಿಗಳಿಂದ ಮಾಹಿತಿ ಪಡೆದು ಮಾತನಾಡಿದರು.

ಮಾನ್ವಿ ಪಟ್ಟಣದ ಸುಮಾರು 50 ಸಾವಿರ ಜನಸಂಖ್ಯೆಗೆ ಈ ಕೆರೆಯಿಂದ ಕುಡಿಯುವ ನೀರು ಪೂರೈಸಲಾಗುತ್ತಿದೆ. ಆದರೆ ಪ್ರಸ್ತುತ ಕೆರೆಯಲ್ಲಿ ಕೇವಲ ಮೂರು ಮೀಟರ್‌ನಷ್ಟು ನೀರು ಸಂಗ್ರಹವಿರುವುದು ಆತಂಕಕಾರಿ ಸಂಗತಿಯಾಗಿದೆ. ಮುಂದಿನ ಬೇಸಿಗೆಯಲ್ಲಿ ನೀರಿನ ಕೊರತೆ ಉಂಟಾಗದಂತೆ ಈಗಿನಿಂದಲೇ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ತಿಳಿಸಿದರು.

85ನೇ ವಿತರಣಾ ಕಾಲುವೆಯ ಮೂಲಕ ರೊಟೇಷನ್ ಪದ್ಧತಿಯಂತೆ ಎಂಟು ದಿನಗಳವರೆಗೆ ಕೆರೆ ತುಂಬಿಸಲು ನೀರು ಹರಿಸಲಾಗುತ್ತಿದೆ. ಈ ಅವಧಿಯಲ್ಲಿ ಕಾಲುವೆಯಿಂದ ಹರಿಯುವ ನೀರು ವ್ಯರ್ಥವಾಗದಂತೆ ಎಚ್ಚರಿಕೆ ವಹಿಸಿ, ಸಾಧ್ಯವಾದಷ್ಟು ಹೆಚ್ಚಿನ ಪ್ರಮಾಣದಲ್ಲಿ ಕೆರೆಗೆ ನೀರು ಸಂಗ್ರಹಿಸುವ ವ್ಯವಸ್ಥೆ ಮಾಡಬೇಕು ಎಂದು ಪುರಸಭೆ ಮುಖ್ಯಾಧಿಕಾರಿ ಪರಶುರಾಮ ದೇವಮಾನೆ ಅವರಿಗೆ ನಿರ್ದೇಶನ ನೀಡಿದರು.

ಕಾಲುವೆಯಲ್ಲಿ ನೀರು 2ನೇ ಪುಟಕ್ಕೆ

ತಿಡಿಗೋಳ ಗ್ರಾಮದಲ್ಲಿ ದಲಿತರಿಗೆ ದೇವಸ್ಥಾನ ಪ್ರವೇಶ: ಸಾಮಾಜಿಕ ಸಮಾನತೆಗೆ ಐತಿಹಾಸಿಕ ಹೆಜ್ಜೆ




ಸಿಂಧನೂರು, ನ. 3: ತಾಲೂಕಿನ ತಿಡಿಗೋಳ ಗ್ರಾಮದಲ್ಲಿ ದಲಿತ ಸಮುದಾಯದವರಿಗೆ ದೇವಸ್ಥಾನ ಪ್ರವೇಶಕ್ಕೆ ಅವಕಾಶ ಕಲ್ಪಿಸುವ ಮೂಲಕ ಹಲವು ವರ್ಷಗಳಿಂದ ಎದುರಾಗಿದ್ದ ಸಾಮಾಜಿಕ ಅಸಮಾನತೆಯ ಸಮಸ್ಯೆಗೆ ಸೌಹಾರ್ದಯುತ ಪರಿಹಾರ ಕಂಡುಕೊಳ್ಳಲಾಗಿದೆ. ಜಿಲ್ಲಾಡಳಿತದ ಮಧ್ಯಸ್ಥಿಕೆ ಹಾಗೂ ಗ್ರಾಮಸ್ಥರ ಸಹಕಾರದೊಂದಿಗೆ ನಡೆದ ಈ ಬೆಳವಣಿಗೆ ಸಾಮಾಜಿಕ ನ್ಯಾಯ, ಸಮಾನತೆ ಮತ್ತು ಸಂವಿಧಾನಿಕ ಮೌಲ್ಯಗಳ ಅನುಷ್ಠಾನದ ದೃಷ್ಟಿಯಿಂದ ಮಹತ್ವ ಪಡೆದುಕೊಂಡಿದೆ.

ಗ್ರಾಮದಲ್ಲಿ ದಲಿತ ಸಮುದಾಯದವರ ದೇವಸ್ಥಾನ ಪ್ರವೇಶಕ್ಕೆ ಸಂಬಂಧಿಸಿದಂತೆ ಉಂಟಾಗಿದ್ದಸಮಸ್ಯೆಯನ್ನುಶಾಂತಿಯುತವಾಗಿ ಬಗೆಹರಿಸುವ ಉದ್ದೇಶದಿಂದ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ನೇತೃತ್ವದಲ್ಲಿ ಶಾಂತಿ ಸಭೆ ನಡೆಸಲಾಯಿತು. ಸಭೆಯಲ್ಲಿ ಗ್ರಾಮದ ಮುಖಂಡರು, ದಲಿತ ಸಮುದಾಯದ ಪ್ರತಿನಿಧಿಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿ, ಪರಸ್ಪರ ಚರ್ಚೆಯ ಮೂಲಕ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ಕುರಿತು ಒಮ್ಮತಕ್ಕೆ ಬಂದರು.

ಸಭೆಯಲ್ಲಿ ಗ್ರಾಮದಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಸಾಮಾಜಿಕ ಸಾಮರಸ್ಯ ಕಾಪಾಡುವ ಅಗತ್ಯವನ್ನು ಒತ್ತಿಹೇಳಲಾಯಿತು. ಜಾತಿ ಆಧಾರಿತ ತಾರತಮ್ಯಕ್ಕೆ ಅವಕಾಶ ನೀಡದೆ ಪ್ರತಿಯೊಬ್ಬ ನಾಗರಿಕನಿಗೂ ಸಮಾನ ಹಕ್ಕು ಮತ್ತು ಗೌರವ ದೊರೆಯುವಂತೆ ನೋಡಿಕೊಳ್ಳಬೇಕೆಂಬ 2ನೇ ಪುಟಕ್ಕೆ

ರೈತರ ಬೆಳೆಗಳಿಗೆ ನೀರು ಹರಿಸಲು ನ.22ರ ಗಡುವು: ಮಾಜಿ ಸಚಿವ ಕೆ. ಶಿವನಗೌಡ ನಾಯಕ ಆಗ್ರಹ



ರಾಯಚೂರು: ಕೃಷ್ಣಾ ಮತ್ತು ತುಂಗಭದ್ರಾ ನದಿಗಳು ಜಿಲ್ಲೆಯ ಮೂಲಕ ಹರಿಯುತ್ತಿದ್ದರೂ ರೈತರ ಕೃಷಿ ಚಟುವಟಿಕೆಗಳಿಗೆ ಸಮರ್ಪಕ ನೀರು ದೊರೆಯುತ್ತಿಲ್ಲ. ನೀರಿನ ಕೊರತೆಯಿಂದ ಭತ್ತ ಹಾಗೂ ಮೆಣಸಿನಕಾಯಿ ಬೆಳೆಗಳು ಒಣಗುವ ಆತಂಕ ಎದುರಾಗಿದ್ದು, ರಾಜ್ಯ ಸರ್ಕಾರ ತಕ್ಷಣ ನೀರು ಬಿಡುಗಡೆ ಮಾಡಿ ರೈತರ ಬೆಳೆಗಳನ್ನು ರಕ್ಷಿಸಬೇಕು ಎಂದು ಮಾಜಿ ಸಚಿವ ಕೆ. ಶಿವನಗೌಡ ನಾಯಕ ಆಗ್ರಹಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ರಾಯಚೂರು, ವಿಜಯನಗರ, ಕೊಪ್ಪಳ, ಬಳ್ಳಾರಿ, ಯಾದಗಿರಿ ಹಾಗೂ ಕಲಬುರಗಿ ಜಿಲ್ಲೆಯ ಕೆಲವು ಭಾಗಗಳ ರೈತರು ನೀರಾವರಿ ಸಮಸ್ಯೆಯಿಂದ ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೃಷ್ಣಾ ಮತ್ತು ತುಂಗಭದ್ರಾ ನದಿಗಳ ನೀರನ್ನು ಸಮರ್ಪಕವಾಗಿ ಬಳಸಿಕೊಂಡು ರೈತರ ಬೆಳೆಗಳಿಗೆ ನೀರು ಒದಗಿಸಬೇಕಾದ ಸರ್ಕಾರ, ರೈತರ ಅಗತ್ಯಗಳಿಗೆ ಆದ್ಯತೆ ನೀಡುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಭಾಗದ ರೈತರಿಗೆ ನೀರು ಒದಗಿಸಲು ಸಾಕಷ್ಟು ನೀರಿನ ಲಭ್ಯತೆ ಇದ್ದರೂ ಕೃಷಿ ಚಟುವಟಿಕೆಗಳಿಗೆ ನೀರು ಹರಿಸುವ ಬದಲು ಜಿಂದಾಲ್ ಮತ್ತು ಬೈದೋಟಾ ಕಂಪನಿಗಳಿಗೆ ನೀರು ಪೂರೈಸಲಾಗುತ್ತಿದೆ. ಅಲ್ಲದೆ, ಆಂಧ್ರಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳಿಗೂ ನೀರು ಹರಿಸಲಾಗುತ್ತಿದೆ ಎಂದು ಆರೋಪಿಸಿದ್ದಾರೆ.

ಕೈಗಾರಿಕೆಗಳು ಹಾಗೂ ಹೊರರಾಜ್ಯಗಳಿಗೆ ನೀರು ಪೂರೈಸುವ ಸಂದರ್ಭದಲ್ಲಿ ಸ್ಥಳೀಯ ರೈತರ ಹಿತಾಸಕ್ತಿಯನ್ನು ಕಡೆಗಣಿಸುವುದು ಸರಿಯಲ್ಲ. ರೈತರು ಬೆಳೆದಿರುವ ಭತ್ತ, ಮೆಣಸಿನಕಾಯಿ ಸೇರಿದಂತೆ ವಿವಿಧ ಬೆಳೆಗಳು ನೀರಿನ ಕೊರತೆಯಿಂದ ಹಾನಿಗೊಳಗಾಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಆದ್ದರಿಂದ ರೈತರ ಬೆಳೆಗಳ ರಕ್ಷಣೆಗೆ ಮೊದಲ ಆದ್ಯತೆ ನೀಡಬೇಕು. ಕೃಷಿಗೆ ಅಗತ್ಯ ನೀರು ಒದಗಿಸುವವರೆಗೆ ಕಂಪನಿಗಳು ಹಾಗೂ ಹೊರರಾಜ್ಯಗಳಿಗೆ ನೀರು ಹರಿಸುವುದನ್ನು ಸ್ಥಗಿತಗೊಳಿಸಬೇಕು ಎಂದು ಒತ್ತಾಯಿಸಿದ್ದಾರೆ.

ನೀರಾವರಿ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ನವಲಿ ಜಲಾಶಯ ಹಾಗೂ ತಿಂಥಣಿ ಜಲಾಶಯ ನಿರ್ಮಾಣಕ್ಕೆ ಸಂಬಂಧಿಸಿದಂತೆ ತುರ್ತು ಕ್ರಮ ಕೈಗೊಳ್ಳಬೇಕು. ಈ ಯೋಜನೆಗಳ ಸಮಗ್ರ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸಿ ಅನುಷ್ಠಾನಕ್ಕೆ ಅಗತ್ಯ ಪ್ರಕ್ರಿಯೆಗಳನ್ನು ಆರಂಭಿಸಬೇಕು ಎಂದು ಆಗ್ರಹಿಸಿದ್ದಾರೆ.

ಈ ಜಲಾಶಯ ಯೋಜನೆಗಳಿಂದ ಐದು ಜಿಲ್ಲೆಗಳ ರೈತರಿಗೆ ಅನುಕೂಲವಾಗುವ ಸಾಧ್ಯತೆಯಿದ್ದು, 2ನೇ ಪುಟಕ್ಕೆ

ಜಿಲ್ಲಾಧಿಕಾರಿಗಳ ವಿರುದ್ಧ ಅನಿತಾ ನವಲಕಲ್ ಆಕ್ರೋಶ: ಸ್ಪಷ್ಟನೆಗೆ 48 ಗಂಟೆಗಳ ಗಡುವು



ರಾಯಚೂರು, ನ.3: ಬರಗಾಲದಿಂದ ತತ್ತರಿಸಿರುವ ಗ್ರಾಮೀಣ ಪ್ರದೇಶಗಳ ಜನರಿಗೆ ಕುಡಿಯುವ ನೀರು ಒದಗಿಸುವಂತೆ ಮನವಿ ಸಲ್ಲಿಸಲು ತೆರಳಿದ್ದ ವೇಳೆ ಜಿಲ್ಲಾಧಿಕಾರಿಗಳು ತಮ್ಮೊಂದಿಗೆ ಅನುಚಿತವಾಗಿ ವರ್ತಿಸಿ, ಕಚೇರಿಯಿಂದ ಹೊರಹೋಗುವಂತೆ ಸೂಚಿಸಿದ್ದಾರೆ ಎಂದು ರೈತಪರ ಹೋರಾಟಗಾರ್ತಿ ಅನಿತಾ ನವಲಕಲ್ ಗಂಭೀರ ಆರೋಪ ಮಾಡಿದ್ದು, ಘಟನೆ ಕುರಿತು 48 ಗಂಟೆಗಳೊಳಗೆ ಸ್ಪಷ್ಟನೆ ನೀಡದಿದ್ದರೆ ಹತ್ತನೂರಿನಲ್ಲಿ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ಆರಂಭಿಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿ ನಡೆಸಿದ ಅವರು, ಜಿಲ್ಲೆಯ ಹಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಅಭಾವ ಉಲ್ಬಣಗೊಂಡಿದೆ. ಗಣೇಕಲ್ ಜಲಾಶಯಕ್ಕೆ ನೀರು ಹರಿಸುವುದು ಹಾಗೂ ಶಾಖಾಪುರ, ಸಿಂಗಡದಿನ್ನಿ ಮತ್ತು ಹೋಕ್ರಾಣಿ ಗ್ರಾಮಗಳ ಜನರಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವಂತೆ ಒತ್ತಾಯಿಸಲು ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಲಾಗಿತ್ತು. ಆದರೆ, ಸಾರ್ವಜನಿಕ ಸಮಸ್ಯೆಗಳನ್ನು ಆಲಿಸುವ ಬದಲು ಜಿಲ್ಲಾಧಿಕಾರಿಗಳು ಅವಾಚ್ಯ ಶಬ್ದಗಳಿಂದ ನಿಂದಿಸಿ, 'ಗೆಟ್ ಔಟ್' ಎಂದು ಹೇಳಿ ಹೊರಗೆ ಕಳುಹಿಸಿದ್ದಾರೆ ಎಂದು ದೂರಿದರು.

ಜನರ ಸಂಕಷ್ಟಗಳಿಗೆ ಸ್ಪಂದಿಸುವುದು ಆಡಳಿತ ವ್ಯವಸ್ಥೆಯ ಪ್ರಮುಖ ಕರ್ತವ್ಯವಾಗಿದೆ. ಅದರಲ್ಲೂ ಜಿಲ್ಲೆಯ ಆಡಳಿತದ ಜವಾಬ್ದಾರಿ ಹೊತ್ತಿರುವ ಜಿಲ್ಲಾಧಿಕಾರಿಗಳು ಸಾರ್ವಜನಿಕರು ಹಾಗೂ ಹೋರಾಟಗಾರರ ಅಹವಾಲುಗಳನ್ನು ತಾಳ್ಮೆಯಿಂದ ಆಲಿಸಿ ಪರಿಹಾರ ಒದಗಿಸಲು ಮುಂದಾಗಬೇಕು. ಆದರೆ, ಮನವಿ ಸಲ್ಲಿಸಲು ಹೋದ ಸಂದರ್ಭದಲ್ಲಿ ತಮಗೆ ಎದುರಾದ ಅನುಭವ ಅತ್ಯಂತ ನೋವುಂಟು ಮಾಡಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

'ನೀವು ಸ್ಥಳೀಯರಾಗಿದ್ದರೆ ಮಾತ್ರ ಮನವಿ ಸಲ್ಲಿಸಿ, ಇಲ್ಲದಿದ್ದರೆ ಹೊರಗೆ ಹೋಗಿ' ಎಂದು ಜಿಲ್ಲಾಧಿಕಾರಿಗಳು ಹೇಳಿರುವುದಾಗಿ ಆರೋಪಿಸಿದ ಅವರು, ಜನರ ಸಮಸ್ಯೆಗಳ ಪರವಾಗಿ ಧ್ವನಿ ಎತ್ತಲು ಸ್ಥಳೀಯರಾಗಿರಬೇಕೆಂಬ ನಿಯಮವಿದೆಯೇ ಎಂದು ಪ್ರಶ್ನಿಸಿದರು.

ಜಿಲ್ಲಾಧಿಕಾರಿಗಳು ಕೂಡ ಬೇರೆ ಪ್ರದೇಶದಿಂದ ಅಧಿಕಾರಿಯಾಗಿ ಜಿಲ್ಲೆಗೆ ಬಂದಿದ್ದಾರೆ. ಹಾಗಿರುವಾಗ ಸಾರ್ವಜನಿಕ ಹಿತಾಸಕ್ತಿಯ ವಿಷಯದಲ್ಲಿ ಹೋರಾಟ ಮಾಡುವವರನ್ನು 2ನೇ ಪುಟಕ್ಕೆ

ರಾಜ್ಯೋತ್ಸವ ಪ್ರಶಸ್ತಿ ಆಯ್ಕೆಯಲ್ಲಿ ರಾಜಕೀಯ ಪ್ರಭಾವದ ಆರೋಪ: ಬಯಲಾಟ ಕಲಾವಿದರ ಕಡೆಗಣನೆಗೆ ಆಕ್ರೋಶ



ರಾಯಚೂರು, ನ.3: ಕನ್ನಡ ನಾಡಿನ ಕಲೆ, ಸಾಹಿತ್ಯ ಹಾಗೂ ಸಂಸ್ಕೃತಿಯ ಬೆಳವಣಿಗೆಗೆ ದಶಕಗಳಿಂದ ಶ್ರಮಿಸುತ್ತಿರುವ ನೈಜ ಕಲಾವಿದರನ್ನು ಕಡೆಗಣಿಸಿ, ರಾಜಕೀಯ ಪ್ರಭಾವ ಮತ್ತು ಬೆಂಬಲ ಹೊಂದಿರುವವರಿಗೆ ರಾಜ್ಯೋತ್ಸವ ಪ್ರಶಸ್ತಿಗಳನ್ನು ನೀಡಲಾಗುತ್ತಿದೆ ಎಂದು ಬಯಲಾಟ ಕಲಾವಿದ ಅಕ್ಬರ್ ಹುಸೇನ್ ಆರೋಪಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕನ್ನಡ ರಾಜ್ಯೋತ್ಸವ ಪ್ರಶಸ್ತಿಗಳ ಆಯ್ಕೆಯಲ್ಲಿ ಕಲಾವಿದರ ನೈಜ ಸಾಧನೆ, ಅನುಭವ ಹಾಗೂ ಕಲಾಸೇವೆಯನ್ನು ಪ್ರಮುಖ ಮಾನದಂಡವಾಗಿ ಪರಿಗಣಿಸಬೇಕು. ಆದರೆ, ರಾಜಕೀಯ ಪ್ರಭಾವದ ಆಧಾರದ ಮೇಲೆ ಪ್ರಶಸ್ತಿ ನೀಡಲಾಗುತ್ತಿದೆ ಎಂಬ ಅನುಮಾನಗಳು ಮೂಡುತ್ತಿದ್ದು, ಇದರಿಂದ ದೀರ್ಘಕಾಲ ಕಲಾಸೇವೆಯಲ್ಲಿ ತೊಡಗಿರುವ ಅರ್ಹ ಕಲಾವಿದರಿಗೆ ಅನ್ಯಾಯವಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಉತ್ತರ ಕರ್ನಾಟಕದ ಸಾಂಪ್ರದಾಯಿಕ ಜಾನಪದ ಕಲಾಪ್ರಕಾರಗಳಲ್ಲಿ ಬಯಲಾಟಕ್ಕೆ ವಿಶಿಷ್ಟ ಸ್ಥಾನವಿದೆ. ಗ್ರಾಮೀಣ ಜನಜೀವನ, ಸಂಸ್ಕೃತಿ, ಸಂಪ್ರದಾಯ ಹಾಗೂ ಪೌರಾಣಿಕ ಕಥೆಗಳನ್ನು ಜನಸಾಮಾನ್ಯರಿಗೆ ಪರಿಚಯಿಸುವಲ್ಲಿ ಬಯಲಾಟ ಕಲಾವಿದರ ಕೊಡುಗೆ ಅಪಾರವಾಗಿದೆ. ಆದರೆ, ಈ ಕಲೆಯನ್ನು ತಲೆಮಾರುಗಳಿಂದ ಉಳಿಸಿಕೊಂಡು ಬಂದಿರುವ ಹಿರಿಯ ಕಲಾವಿದರಿಗೆ ಸರ್ಕಾರದಿಂದ ದೊರೆಯಬೇಕಾದ ಗೌರವ ಮತ್ತು ಮಾನ್ಯತೆ ಸಿಗುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ರಾಯಚೂರು ಜಿಲ್ಲೆಯ ಯಾಪಲದಿನ್ನಿ ಗ್ರಾಮದ ಹಿರಿಯ ಬಯಲಾಟ ಕಲಾವಿದ ಸಣ್ಣ ವೆಂಕಟೇಶ್ ಅವರ ಕಲಾಸೇವೆಯೇ ಇದಕ್ಕೆ ಉದಾಹರಣೆಯಾಗಿದೆ. ಕಳೆದ 40 ವರ್ಷಗಳಿಂದ ಬಯಲಾಟ ಕಲೆಗೆ ತಮ್ಮ ಜೀವನವನ್ನು ಮುಡಿಪಾಗಿಟ್ಟಿರುವ ಅವರು, ಕುಟುಂಬದ ಸದಸ್ಯರೊಂದಿಗೆ ರಾಜ್ಯದ ವಿವಿಧೆಡೆ ಪ್ರದರ್ಶನಗಳನ್ನು ನೀಡಿ ಸಾಂಪ್ರದಾಯಿಕ ಕಲೆಯನ್ನು ಜನರಿಗೆ ತಲುಪಿಸಿದ್ದಾರೆ. ರಂಗಾಯಣ, ಕರ್ನಾಟಕ ನಾಟಕ ಅಕಾಡೆಮಿ, 2ನೇ ಪುಟಕ್ಕೆ

ನ.6ರಂದು ದೇವದುರ್ಗದಲ್ಲಿ ಗೋರ ಸಮಾಜದ ಯುವ ಗರ್ಜನಾ ಸಮಾವೇಶ



ರಾಯಚೂರು, ನ.3: ಗೋರ ಸಮಾಜದ ಸಂಘಟನೆಯನ್ನು ತಾಂಡಾ ಮಟ್ಟದಿಂದ ಬಲಪಡಿಸುವುದು, ಸಮುದಾಯದ ಹಕ್ಕುಗಳಿಗಾಗಿ ಸಂಘಟಿತ ಹೋರಾಟ ರೂಪಿಸುವುದು ಹಾಗೂ ಯುವಜನರಲ್ಲಿ ಸಾಮಾಜಿಕ ಜಾಗೃತಿ ಮೂಡಿಸುವ ಉದ್ದೇಶದಿಂದ ರಾಷ್ಟ್ರೀಯ ಗೋರ ಸೇನೆ ವತಿಯಿಂದ ನವೆಂಬರ್ 6ರಂದು ದೇವದುರ್ಗ ನಗರದಲ್ಲಿ ತಾಲೂಕು ಮಟ್ಟದ ಯುವ ಗರ್ಜನಾ ಸಮಾವೇಶ ಆಯೋಜಿಸಲಾಗಿದೆ ಎಂದು ಸಂಘಟನೆಯ ರಾಯಚೂರು ಜಿಲ್ಲಾಧ್ಯಕ್ಷ ರಮೇಶ ರಾಠೋಡ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗೋರ ಸಮಾಜದ ಏಕತೆ, ಸ್ವಾಭಿಮಾನ ಹಾಗೂ ಸಾಮಾಜಿಕ ನ್ಯಾಯದ ಆಶಯದೊಂದಿಗೆ ಏಕ್ ತಾಂಡೋದಸ್ ದಾಂಡ್, ಹಮಾರೋ ತಾಂಡೋಹಮಾರೋ ರಾಜ್ ಎಂಬ ವಿಶೇಷ ಅಭಿಯಾನ ಆರಂಭಿಸಲಾಗುತ್ತಿದೆ. ಈ ಅಭಿಯಾನದ ಮೂಲಕ ಸಮುದಾಯದ ಯುವಶಕ್ತಿಯನ್ನು ಒಗ್ಗೂಡಿಸಿ, ತಾಂಡಾಗಳ ಸಮಗ್ರ ಅಭಿವೃದ್ಧಿಗೆ ಹೊಸ ದಿಕ್ಕು ನೀಡುವ ಸಂಕಲ್ಪ ಮಾಡಲಾಗಿದೆ ಎಂದರು.

ಗೋರ ಸಮಾಜದ ಅನೇಕ ತಾಂಡಾಗಳು ಇಂದಿಗೂ ಕುಡಿಯುವ ನೀರು, ರಸ್ತೆ, ಶಿಕ್ಷಣ, ಆರೋಗ್ಯ ಸೇರಿದಂತೆ ಅಗತ್ಯ ಮೂಲಸೌಕರ್ಯಗಳ ಕೊರತೆಯನ್ನು ಎದುರಿಸುತ್ತಿವೆ. ಈ ಸಮಸ್ಯೆಗಳನ್ನು ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಸರ್ಕಾರದ ಗಮನಕ್ಕೆ ತಂದು ಪರಿಹಾರ ಪಡೆಯಲು ಸಂಘಟಿತ ಪ್ರಯತ್ನ ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಪ್ರತಿ ತಾಂಡಾದಲ್ಲಿ ಸಮಾಜದ ಅಭಿವೃದ್ಧಿಗೆ ಬದ್ಧರಾಗಿರುವ ಹತ್ತು ಮಂದಿ ನಿಷ್ಠಾವಂತ, ಕ್ರಿಯಾಶೀಲ ಹಾಗೂ ಸ್ವಾಭಿಮಾನಿ ಕಾರ್ಯಕರ್ತರನ್ನು ಗುರುತಿಸಿ ತಂಡಗಳನ್ನು ರಚಿಸಲಾಗುವುದು ಎಂದು ವಿವರಿಸಿದರು.

ತಾಂಡಾ ಮಟ್ಟದಲ್ಲಿ ರಚನೆಯಾಗುವ ತಂಡಗಳು ಸ್ಥಳೀಯ ಸಮಸ್ಯೆಗಳನ್ನು ಗುರುತಿಸುವುದು, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಸರ್ಕಾರಿ ಯೋಜನೆಗಳ ಮಾಹಿತಿ ತಲುಪಿಸುವುದು ಹಾಗೂ ಸಮುದಾಯದ ಹಕ್ಕುಗಳ ರಕ್ಷಣೆಗೆ ಹೋರಾಟ ನಡೆಸುವ ಜವಾಬ್ದಾರಿ ವಹಿಸಿಕೊಳ್ಳಲಿವೆ. ಇದರಿಂದ ಸಂಘಟನೆಯ ಕಾರ್ಯಚಟುವಟಿಕೆಗಳು ಕೇವಲ ತಾಲೂಕು ಮತ್ತು ಜಿಲ್ಲಾ ಕೇಂದ್ರಗಳಿಗೆ ಸೀಮಿತವಾಗದೆ ಪ್ರತಿಯೊಂದು ತಾಂಡಾವನ್ನೂ ತಲುಪಲಿವೆ ಎಂದು ಹೇಳಿದರು.

ಹಮಾರೋ 2ನೇ ಪುಟಕ್ಕೆ

ಉದ್ಯಮಿ ಕೊಲೆ ಆರೋಪಿ ಬಂಧನಕ್ಕೆ ಪೊಲೀಸರ ಕಾರ್ಯವೈಖರಿ ಶ್ಲಾಘನೆ: ವ್ಯಾಪಾರಿಗಳಿಗೆ ಭದ್ರತೆ ಹೆಚ್ಚಿಸಲು ವಾಣಿಜ್ಯೋದ್ಯಮ ಸಂಘ ಮನವಿ





ರಾಯಚೂರು, ನ.2: ನಗರದ ಎಲ್‌ಬಿಎಸ್ ನಗರದಲ್ಲಿ ನಡೆದ ಉದ್ಯಮಿ ಬಾಪುರು ನರಸಿಂಹಯ್ಯ ಅವರ ಕೊಲೆ ಪ್ರಕರಣದ ಪ್ರಮುಖ ಆರೋಪಿ ತಿಲಕ್ ಸಿಂಗ್‌ನನ್ನು ಕ್ಷಿಪ್ರವಾಗಿ ಬಂಧಿಸಿದ ಪೊಲೀಸ್ ಇಲಾಖೆಯ ಕಾರ್ಯವೈಖರಿಯನ್ನು ರಾಯಚೂರು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ (ಆರ್‌ಡಿಸಿಸಿಐ) ಶ್ಲಾಘಿಸಿದ್ದು, ವ್ಯಾಪಾರಿಗಳು ಹಾಗೂ ಸಾರ್ವಜನಿಕರ ಸುರಕ್ಷತೆಗಾಗಿ ನಗರದಲ್ಲಿ ಪೊಲೀಸ್ ಭದ್ರತೆಯನ್ನು ಮತ್ತಷ್ಟು ಬಲಪಡಿಸುವಂತೆ ಮನವಿ ಮಾಡಿದೆ.

ಸಂಸ್ಥೆಯ ಅಧ್ಯಕ್ಷ ಎಸ್. ಕಮಲ್ ಕುಮಾರ್ ಹಾಗೂ ಕಾರ್ಯದರ್ಶಿ ವೈ. ಜಂಬಣ್ಣ ನೇತೃತ್ವದ ನಿಯೋಗವು ಸೋಮವಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಶು ಗಿರಿ ಹಾಗೂ ಉಪ ಪೊಲೀಸ್ ವರಿಷ್ಠಾಧಿಕಾರಿ ಶಾಂತವೀರ ಇ. ಅವರನ್ನು ಎಸ್‌ಪಿ ಕಚೇರಿಯಲ್ಲಿ ಭೇಟಿಯಾಗಿ ಮನವಿ ಸಲ್ಲಿಸಿತು.

ನಗರದ ಎಲ್‌ಬಿಎಸ್ ನಗರದಲ್ಲಿ 38 ವರ್ಷದ ಉದ್ಯಮಿ ಬಾಪುರು ನರಸಿಂಹಯ್ಯ ಅವರ ಹತ್ಯೆ ನಡೆದ ಬಳಿಕ ಮಾರುಕಟ್ಟೆ ಯಾರ್ಡ್ ಪೊಲೀಸ್ ಠಾಣೆಯ ಸಿಬ್ಬಂದಿ ತ್ವರಿತ ಕಾರ್ಯಾಚರಣೆ ನಡೆಸಿ ಪ್ರಮುಖ ಆರೋಪಿ ತಿಲಕ್ ಸಿಂಗ್‌ನನ್ನು ಬಂಧಿಸಿರುವುದು ಶ್ಲಾಘನೀಯವಾಗಿದೆ. ಪೊಲೀಸ್ ಇಲಾಖೆಯ ಈ ಕ್ರಮದಿಂದ ಸಾರ್ವಜನಿಕರಲ್ಲಿ ಕಾನೂನು ಸುವ್ಯವಸ್ಥೆಯ ಬಗ್ಗೆ ವಿಶ್ವಾಸ ಮೂಡಿದೆ ಎಂದು ನಿಯೋಗದ ಸದಸ್ಯರು ಮೆಚ್ಚುಗೆ ವ್ಯಕ್ತಪಡಿಸಿದರು.

ಆದರೆ, ಉದ್ಯಮಿಯ ಹತ್ಯೆ ಘಟನೆಯಿಂದ ನಗರದ ವ್ಯಾಪಾರಿಗಳು, ಅಂಗಡಿಕಾರರು ಹಾಗೂ ಸಣ್ಣ ಉದ್ಯಮಿಗಳಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದೆ. ಇಂತಹ ಘಟನೆಗಳು ಮರುಕಳಿಸದಂತೆ ಪೊಲೀಸ್ ಇಲಾಖೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಧಿವಿಜ್ಞಾನ ವರದಿಗಳು, ಪ್ರತ್ಯಕ್ಷದರ್ಶಿಗಳ ಹೇಳಿಕೆಗಳು ಹಾಗೂ ಸಿಸಿಟಿವಿ ದೃಶ್ಯಾವಳಿಗಳು ಸೇರಿದಂತೆ ಅಗತ್ಯ ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಿ, ಸಮಗ್ರ ದೋಷಾರೋಪಣ ಪಟ್ಟಿಯನ್ನು ಶೀಘ್ರ ನ್ಯಾಯಾಲಯಕ್ಕೆ ಸಲ್ಲಿಸಬೇಕು. ಪ್ರಕರಣದ ವಿಚಾರಣೆ ತ್ವರಿತವಾಗಿ ನಡೆಯಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ನಗರದ ಎಲ್‌ಬಿಎಸ್ ನಗರ, ಪ್ರಮುಖ ಮಾರುಕಟ್ಟೆ ಪ್ರದೇಶಗಳು, ವಾಣಿಜ್ಯ ಕೇಂದ್ರಗಳು ಹಾಗೂ ವ್ಯಾಪಾರ ಚಟುವಟಿಕೆಗಳು ಹೆಚ್ಚಿರುವ ಪ್ರದೇಶಗಳಲ್ಲಿ ಹಗಲು ಮತ್ತು ರಾತ್ರಿ ಪೊಲೀಸ್ ಗಸ್ತು ಹೆಚ್ಚಿಸಬೇಕು. ಸಮಾಜವಿರೋಧಿ ಚಟುವಟಿಕೆಗಳಿಗೆ ಕಡಿವಾಣ ಹಾಕುವ ಮೂಲಕ ವ್ಯಾಪಾರಿಗಳು ನಿರ್ಭೀತಿಯಿಂದ ತಮ್ಮ ವ್ಯವಹಾರಗಳನ್ನು ನಡೆಸಲು ಅನುಕೂಲಕರ ವಾತಾವರಣ ನಿರ್ಮಿಸಬೇಕು ಎಂದು ಆಗ್ರಹಿಸಿದರು.

ಸಣ್ಣ ವ್ಯಾಪಾರಿಗಳಿಂದ ಬಲವಂತವಾಗಿ ಹಣ ವಸೂಲಿ ಮಾಡುವುದು, ಉಚಿತವಾಗಿ ಸರಕುಗಳನ್ನು ನೀಡುವಂತೆ ಒತ್ತಾಯಿಸುವುದು, ಬೆದರಿಕೆ ಹಾಕುವುದು ಹಾಗೂ ಹಫ್ತಾ ವಸೂಲಿ ಮಾಡುವಂತಹ ಕೃತ್ಯಗಳಲ್ಲಿ ತೊಡಗುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ವ್ಯಾಪಾರಿಗಳಿಗೆ ಬೆದರಿಕೆ ಅಥವಾ ಕಿರುಕುಳ ನೀಡುವ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ತಿಳಿಸಿದರು.

ರಾತ್ರಿ ವೇಳೆ ನಡೆಯುವ ಅಕ್ರಮ ಮದ್ಯಪಾನ ಹಾಗೂ ಮಾದಕವಸ್ತು ಚಟುವಟಿಕೆಗಳನ್ನು ನಿಯಂತ್ರಿಸಬೇಕು. ಪ್ರಮುಖ ವ್ಯಾಪಾರ ಪ್ರದೇಶಗಳಲ್ಲಿ ಸಂಚಾರ ವ್ಯವಸ್ಥೆಯನ್ನು ಸುಗಮಗೊಳಿಸುವುದರ ಜೊತೆಗೆ ಸಾರ್ವಜನಿಕ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

ನಗರದ ಪ್ರಮುಖ ಮಾರುಕಟ್ಟೆ ಪ್ರದೇಶಗಳಲ್ಲಿ ಅಳವಡಿಸಿರುವ ಸಾರ್ವಜನಿಕ ಸಿಸಿಟಿವಿ ಕ್ಯಾಮೆರಾಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿವೆಯೇ ಎಂಬುದನ್ನು ಪರಿಶೀಲಿಸಬೇಕು. ಮಹಾನಗರ ಪಾಲಿಕೆ ಹಾಗೂ ಸಂಬಂಧಪಟ್ಟ ಇಲಾಖೆಗಳ ಸಹಯೋಗದೊಂದಿಗೆ ಕ್ಯಾಮೆರಾಗಳ ನಿರ್ವಹಣೆ ಮತ್ತು ನಿರಂತರ ಮೇಲ್ವಿಚಾರಣೆಗೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಆರ್‌ಡಿಸಿಸಿಐ ಅಧ್ಯಕ್ಷ ಎಸ್. ಕಮಲ್ ಕುರ್ಮಾ,ರ ರಾಯಚೂರು ನಗರದ ಆರ್ಥಿಕ ಚಟುವಟಿಕೆಗಳಲ್ಲಿ ವ್ಯಾಪಾರಿ ಸಮುದಾಯ ಪ್ರಮುಖ ಪಾತ್ರ ವಹಿಸುತ್ತಿದೆ. ವ್ಯಾಪಾರಿಗಳು ಸುರಕ್ಷಿತ ವಾತಾವರಣದಲ್ಲಿ ತಮ್ಮ ಉದ್ಯಮಗಳನ್ನು ನಡೆಸಲು ಪೊಲೀಸ್ ಇಲಾಖೆಯ ಸಹಕಾರ ಅತ್ಯಗತ್ಯವಾಗಿದೆ ಎಂದು ಹೇಳಿದರು.

ಉದ್ಯಮಿ ಕೊಲೆ ಪ್ರಕರಣದ ಆರೋಪಿಯನ್ನು ತ್ವರಿತವಾಗಿ ಬಂಧಿಸಿರುವ ಪೊಲೀಸ್ ಇಲಾಖೆಯ ಕ್ರಮವನ್ನು ವ್ಯಾಪಾರಿ ಸಮುದಾಯ ಸ್ವಾಗತಿಸುತ್ತದೆ. ಆದರೆ, ಇಂತಹ ಘಟನೆಗಳು ಮರುಕಳಿಸದಂತೆ ಶಾಶ್ವತ ಭದ್ರತಾ ಕ್ರಮಗಳನ್ನು ಕೈಗೊಳ್ಳುವುದು ಅಗತ್ಯವಾಗಿದೆ. ನಗರದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಕೈಗೊಳ್ಳುವ ಎಲ್ಲ ರಚನಾತ್ಮಕ ಕ್ರಮಗಳಿಗೆ ವಾಣಿಜ್ಯೋದ್ಯಮ ಸಂಘ ಸಂಪೂರ್ಣ ಸಹಕಾರ ನೀಡಲಿದೆ ಎಂದು ತಿಳಿಸಿದರು.

ನಿಯೋಗದಲ್ಲಿ ಸಂಸ್ಥೆಯ ಹಿರಿಯ ಸದಸ್ಯರಾದ ತ್ರಿವಿಕ್ರಮ್ ಜೋಶಿ, ಸಾವಿತ್ರಿ ಪುರುಷೋತ್ತಮ್, ಅಂಬಾಟಿ ವೆಂಕಟರಾಜ್ ಗುಪ್ತಾ, ಕೆ.ವಿ. ಮನೋಹರ್ ಹಾಗೂ ಚೇತನ್ ದೋಕ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಅಮೃತ ವಾಣಿ

ಎಲ್ಲರನ್ನೂ ಗೌರವಿಸುವುದು ನಮ್ಮ ಮಾನವೀಯತೆ, ಅದನ್ನು ಉಳಿಸಿಕೊಳ್ಳುವುದು ಅವರ ಯೋಗ್ಯತೆ.



ನ.6ರಂದು ದೇವದುರ್ಗದಲ್ಲಿ ಗೋರ ಸಮಾಜದ ಯುವ ಗರ್ಜನಾ ಸಮಾವೇಶ

ತಾಂಡೋಹಮಾರೋ ರಾಜ್ ಎಂಬ ಘೋಷಣೆ ತಾಂಡಾಗಳ ಸ್ವಾಭಿಮಾನ, ಸ್ವಾವಲಂಬನೆ ಹಾಗೂ ಅಭಿವೃದ್ಧಿಯ ಆಶಯವನ್ನು ಪ್ರತಿಬಿಂಬಿಸುತ್ತದೆ. ಸಮುದಾಯದ ಜನರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ಒಗ್ಗಟ್ಟಿನಿಂದ ಧ್ವನಿ ಎತ್ತಬೇಕು. ಸಾಮಾಜಿಕ ಅನ್ಯಾಯ, ಶೋಷಣೆ ಮತ್ತು ತಾರತಮ್ಯದ ವಿರುದ್ಧ ಜಾಗೃತರಾಗಿ ಸಂವಿಧಾನಬದ್ಧ ಹಕ್ಕುಗಳನ್ನು ಪಡೆದುಕೊಳ್ಳುವ ನಿಟ್ಟಿನಲ್ಲಿ ಯುವಕರು ಮುಂಚೂಣಿಯಲ್ಲಿ ನಿಲ್ಲಬೇಕು ಎಂದು ಕರೆ ನೀಡಿದರು.

ಸಂತ ಸೇವಾಲಾಲ್ ಮಹಾರಾಜರ ತತ್ವಾದರ್ಶಗಳು ಹಾಗೂ ನಾಯಕ ಕಾಶಿನಾಥ ಭೀಯಾ ಅವರ ಸಮಾಜಸೇವೆಯ ಚಿಂತನೆಗಳನ್ನು ಯುವಪೀಳಿಗೆಗೆ ಪರಿಚಯಿಸುವುದು ಸಂಘಟನೆಯ ಪ್ರಮುಖ ಉದ್ದೇಶವಾಗಿದೆ. ಶಿಕ್ಷಣಕ್ಕೆ ಆದ್ಯತೆ ನೀಡುವುದು, ಯುವಜನರನ್ನು ದುಶ್ಚಟಗಳಿಂದ ದೂರವಿಡುವುದು, ಸ್ವಯಂ ಉದ್ಯೋಗ ಮತ್ತು ಸ್ವಾವಲಂಬನೆಗೆ ಪ್ರೋತ್ಸಾಹ ನೀಡುವುದರ ಜೊತೆಗೆ ಗೋರ ಸಮಾಜದ ವಿಶಿಷ್ಟ ಭಾಷೆ, ಸಂಸ್ಕೃತಿ, ಸಂಪ್ರದಾಯ ಹಾಗೂ ಪರಂಪರೆಯನ್ನು ಉಳಿಸಿ ಬೆಳೆಸಲು ಕಾರ್ಯಕ್ರಮಗಳನ್ನು ರೂಪಿಸಲಾಗುವುದು ಎಂದು ತಿಳಿಸಿದರು.

ನವೆಂಬರ್ 6ರಂದು ದೇವದುರ್ಗದಲ್ಲಿ ನಡೆಯುವ ಸಮಾವೇಶಕ್ಕೆ ಕರ್ನಾಟಕ ಸೇರಿದಂತೆ ಹೊರರಾಜ್ಯಗಳಿಂದ ಸಂತರು, ಸಮಾಜದ ಗಣ್ಯರು, ಮುಖಂಡರು ಹಾಗೂ ರಾಷ್ಟ್ರೀಯ ಗೋರ ಸೇನೆಯ ಪದಾಧಿಕಾರಿಗಳು ಆಗಮಿಸಲಿದ್ದಾರೆ. ಸಮಾವೇಶದ ಅಂಗವಾಗಿ ಸಂಘಟನೆಯ ಕಾರ್ಯಕರ್ತರಿಂದ ದೇವದುರ್ಗ ನಗರದ ಪ್ರಮುಖ ರಸ್ತೆಗಳಲ್ಲಿ ಭವ್ಯ ಪಥಸಂಚಲನ ಹಮ್ಮಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

ಸಮುದಾಯದ ಭವಿಷ್ಯ ರೂಪಿಸುವಲ್ಲಿ ಯುವಜನರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ತಾಂಡಾಗಳ ಅಭಿವೃದ್ಧಿ ಮತ್ತು ಸಮಾಜದ ಹಿತರಕ್ಷಣೆಗೆ ಪ್ರತಿಯೊಬ್ಬರೂ ಸಂಘಟಿತರಾಗಬೇಕಿದೆ. ಆದ್ದರಿಂದ ದೇವದುರ್ಗ ತಾಲೂಕು ಸೇರಿದಂತೆ ಜಿಲ್ಲೆಯ ವಿವಿಧ ತಾಂಡಾಗಳ ಯುವಕರು, ಮಹಿಳೆಯರು, ಹಿರಿಯರು ಹಾಗೂ ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯುವ ಗರ್ಜನಾ ಸಮಾವೇಶವನ್ನು ಯಶಸ್ವಿಗೊಳಿಸಬೇಕು ಎಂದು ರಮೇಶ ರಾಠೋಡ್ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ನರೇಶ್ ಜಾದವ್, ನಾಗರಾಜ ಪವಾರ, ಭೂದೇಪ್ಪ ರಾಠೋಡ್, ರವಿ ಪವಾರ, ಭೀಮಣ್ಣ, ಬಂಗಾರ ಬಂಡಿ, ಅಮರೇಶ ಹಾಗೂ ಮೌನೇಶ ಉಪಸ್ಥಿತರಿದ್ದರು.

ರೈತರ ಬೆಳೆಗಳಿಗೆ ನೀರು ಹರಿಸಲು ನ.22ರ ಗಡುವು: ಮಾಜಿ ಸಚಿವ ಕೆ. ಶಿವನಗೌಡ ನಾಯಕ ಆಗ್ರಹ

ನೀರಾವರಿ ಸೌಲಭ್ಯ ವಿಸ್ತರಣೆಯೊಂದಿಗೆ ಕೃಷಿ ಚಟುವಟಿಕೆಗಳಿಗೆ ಹೆಚ್ಚಿನ ನೆರವು ದೊರೆಯಲಿದೆ. ಪ್ರಸ್ತುತ ರೈತರು ಎದುರಿಸುತ್ತಿರುವ ನೀರಿನ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಸರ್ಕಾರ ತುರ್ತು ಸಭೆ ನಡೆಸಬೇಕು. ಸಂಬಂಧಪಟ್ಟ ಜಿಲ್ಲೆಗಳ ಜನಪ್ರತಿನಿಧಿಗಳು, ನೀರಾವರಿ ಇಲಾಖೆ ಅಧಿಕಾರಿಗಳು ಹಾಗೂ ರೈತರ ಪ್ರತಿನಿಧಿಗಳೊಂದಿಗೆ ಚರ್ಚಿಸಿ ಸೂಕ್ತ ಪರಿಹಾರ ಕಂಡುಕೊಳ್ಳಬೇಕು ಎಂದು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ನೀರಾವರಿ ಸಮಸ್ಯೆ ಗಂಭೀರ ಸ್ವರೂಪ ಪಡೆಯಲು ಸ್ಥಳೀಯ ಜನಪ್ರತಿನಿಧಿಗಳ ನಿರ್ಲಕ್ಷ್ಯವೂ ಕಾರಣವಾಗಿದೆ ಎಂದು ಆರೋಪಿಸಿರುವ ಅವರು, ರೈತರ ಹಿತಾಸಕ್ತಿಯ ವಿಷಯದಲ್ಲಿ ರಾಜಕೀಯ ಭಿನ್ನಾಭಿಪ್ರಾಯಗಳನ್ನು ಬದಿಗಿಡಬೇಕು. ಪಕ್ಷಭೇದ ಮರೆತು ಎಲ್ಲ ಜನಪ್ರತಿನಿಧಿಗಳು ಒಗ್ಗಟ್ಟಿನಿಂದ ರೈತರ ಪರ ಧ್ವನಿ ಎತ್ತಬೇಕು ಎಂದು ಕರೆ ನೀಡಿದ್ದಾರೆ.

ಕೃಷಿಯನ್ನೇ ನಂಬಿ ಬದುಕುತ್ತಿರುವ ರೈತರು ಬೆಳೆಗಳನ್ನು ಉಳಿಸಿಕೊಳ್ಳಲು ಪರದಾಡುತ್ತಿರುವ ಸಂದರ್ಭದಲ್ಲಿ ಸರ್ಕಾರ ನಿರ್ಲಕ್ಷ್ಯ ವಹಿಸಬಾರದು. ರೈತರ ಬದುಕು ಹಾಗೂ ಕೃಷಿ ಹಿತಾಸಕ್ತಿಗೆ ಮೊದಲ ಆದ್ಯತೆ ನೀಡಬೇಕು. ನೀರಾವರಿ ಸಮಸ್ಯೆಯನ್ನು ಮಾನವೀಯ ಹಾಗೂ ನ್ಯಾಯಸಮ್ಮತ ದೃಷ್ಟಿಕೋನದಿಂದ ಪರಿಗಣಿಸಿ ತಕ್ಷಣ ಪರಿಹಾರ ಒದಗಿಸಬೇಕು ಎಂದು ಒತ್ತಾಯಿಸಿದ್ದಾರೆ.

ರಾಜ್ಯ ಸರ್ಕಾರ ರೈತರ ತಾಳ್ಮೆಯನ್ನು ಪರೀಕ್ಷಿಸದೆ ನವೆಂಬರ್ 22ರೊಳಗೆ ನೀರಾವರಿ ಸಮಸ್ಯೆಗೆ ಸೂಕ್ತ ಪರಿಹಾರ ಒದಗಿಸಬೇಕು. ಬೆಳೆಗಳಿಗೆ ಅಗತ್ಯ ನೀರು ಬಿಡುಗಡೆ ಮಾಡುವ ಮೂಲಕ ರೈತರನ್ನು ಸಂಕಷ್ಟದಿಂದ ಪಾರು ಮಾಡಬೇಕು ಎಂದು ಮಾಜಿ ಸಚಿವ ಕೆ. ಶಿವನಗೌಡ ನಾಯಕ ಆಗ್ರಹಿಸಿದ್ದಾರೆ.

ಜಿಲ್ಲಾಧಿಕಾರಿಗಳ ವಿರುದ್ಧ ಅನಿತಾ ನವಲಕಲ್ ಆಕ್ರೋಶ: ಸ್ಪಷ್ಟನೆಗೆ 48 ಗಂಟೆಗಳ ಗಡುವು

ಸ್ಥಳೀಯರು ಮತ್ತು ಹೊರಗಿನವರು ಎಂದು ಪ್ರತ್ಯೇಕಿಸುವುದು ಎಷ್ಟರಮಟ್ಟಿಗೆ ಸಮಂಜಸ? ಪ್ರಜಾಪ್ರಭುತ್ವದಲ್ಲಿ ಯಾವುದೇ ಪ್ರದೇಶದ ಜನರ ಸಮಸ್ಯೆಗಳ ಕುರಿತು ಧ್ವನಿ ಎತ್ತುವ ಹಕ್ಕು ಪ್ರತಿಯೊಬ್ಬ ನಾಗರಿಕನಿಗೂ ಇದೆ. ಈ ಹಕ್ಕನ್ನು ಪ್ರಶ್ನಿಸುವ ರೀತಿಯಲ್ಲಿ ಅಧಿಕಾರಿಗಳು ನಡೆದುಕೊಳ್ಳುವುದು ಸರಿಯಲ್ಲ ಎಂದು ಆಕ್ಷೇಪಿಸಿದರು.

ಬಂಗಾರಪ್ಪನ ಕೆರೆಗೆ ನೀರು ಹರಿಸುವುದು, ಗಣೇಕಲ್ ಜಲಾಶಯಕ್ಕೆ ನೀರು ಬಿಡುಗಡೆ ಮಾಡುವುದು ಸೇರಿದಂತೆ ರೈತರು ಹಾಗೂ ಗ್ರಾಮೀಣ ಜನರ ಮೂಲಸೌಕರ್ಯ ಸಮಸ್ಯೆಗಳ ಪರಿಹಾರಕ್ಕಾಗಿ ಈ ಹಿಂದೆಯೂ ಹಲವು ಹೋರಾಟಗಳನ್ನು ನಡೆಸಲಾಗಿದೆ. ಯಾವುದೇ ವೈಯಕ್ತಿಕ ಹಿತಾಸಕ್ತಿಯಿಂದ ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಿರಲಿಲ್ಲ. ಕುಡಿಯುವ ನೀರಿನ ಸಮಸ್ಯೆಯಿಂದ ಸಂಕಷ್ಟಕ್ಕೆ ಸಿಲುಕಿರುವ ಗ್ರಾಮಸ್ಥರ ಪರವಾಗಿ ಮನವಿ ಸಲ್ಲಿಸುವುದೇ ತಮ್ಮ ಉದ್ದೇಶವಾಗಿತ್ತು ಎಂದು ಸ್ಪಷ್ಟಪಡಿಸಿದರು.

ಅಧಿಕಾರಿಗಳಿಂದ ಗೌರವ ಅಥವಾ ವಿಶೇಷ ಸೌಲಭ್ಯ ನಿರೀಕ್ಷಿಸುತ್ತಿಲ್ಲ. ಜನರ ಸಮಸ್ಯೆಗಳಿಗೆ ಸ್ಪಂದಿಸುವ ಕನಿಷ್ಠ ಸೌಜನ್ಯವನ್ನಷ್ಟೇ ಬಯಸುತ್ತಿದ್ದೇವೆ. ಜಿಲ್ಲಾಧಿಕಾರಿಗಳು ಕ್ಷಮೆಯಾಚಿಸಬೇಕೆಂಬ ಬೇಡಿಕೆಯೂ ನಮ್ಮದಲ್ಲ. ಆದರೆ, ಮನವಿ ಸಲ್ಲಿಸಲು ಬಂದವರನ್ನು ಅವಮಾನಿಸಿ ಕಚೇರಿಯಿಂದ ಹೊರಗೆ ಕಳುಹಿಸಲು ಕಾರಣವೇನು ಎಂಬುದನ್ನು ಸಾರ್ವಜನಿಕವಾಗಿ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ಘಟನೆ ಕುರಿತು ಜಿಲ್ಲಾಧಿಕಾರಿಗಳು ಮುಂದಿನ 48 ಗಂಟೆಗಳೊಳಗೆ ಸಮರ್ಪಕ ಉತ್ತರ ನೀಡಬೇಕು. ಇಲ್ಲವಾದಲ್ಲಿ ಹತ್ತನೂರಿನಲ್ಲಿ ಮಹಾತ್ಮ ಗಾಂಧೀಜಿಯವರ ಅಹಿಂಸಾ ತತ್ವದಡಿ ಶಾಂತಿಯುತ ಉಪವಾಸ ಸತ್ಯಾಗ್ರಹ ಕೈಗೊಳ್ಳಲಾಗುವುದು. ಬೇಡಿಕೆಗೆ ಸ್ಪಂದನೆ ದೊರೆಯುವವರೆಗೂ ಹೋರಾಟದಿಂದ ಹಿಂದೆ ಸರಿಯುವುದಿಲ್ಲ. ಅಗತ್ಯಬಿದ್ದರೆ ಆಮರಣ ಉಪವಾಸ ಸತ್ಯಾಗ್ರಹಕ್ಕೂ ಮುಂದಾಗುವುದಾಗಿ ಅನಿತಾ ನವಲಕಲ್ ಎಚ್ಚರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ರೈತರಾದ ಚೆನ್ನಪ್ಪ, ಮಲ್ಲಿಕಾರ್ಜುನಪ್ಪ ಹಾಗೂ ನಾಗೇಂದ್ರ ಉಪಸ್ಥಿತರಿದ್ದರು.

ರಾಜ್ಯೋತ್ಸವ ಪ್ರಶಸ್ತಿ ಆಯ್ಕೆಯಲ್ಲಿ ರಾಜಕೀಯ ಪ್ರಭಾವದ ಆರೋಪ: ಬಯಲಾಟ ಕಲಾವಿದರ ಕಡೆಗಣನೆಗೆ ಆಕ್ರೋಶ

ಜಾನಪದ ಅಕಾಡೆಮಿ ಹಾಗೂ ಬಯಲಾಟ ಅಕಾಡೆಮಿಗಳ ರಾಜ್ಯಮಟ್ಟದ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ತಮ್ಮ ಕಲಾಪ್ರತಿಭೆಯನ್ನು ಪ್ರದರ್ಶಿಸಿದ್ದಾರೆ ಎಂದು ವಿವರಿಸಿದರು.

ಕೇವಲ ಪ್ರದರ್ಶನಗಳಿಗೆ ಸೀಮಿತವಾಗದೆ ವಿವಿಧೆಡೆ ಬಯಲಾಟ ತರಬೇತಿದಾರರಾಗಿ ಕಾರ್ಯನಿರ್ವಹಿಸಿರುವ ಸಣ್ಣ ವೆಂಕಟೇಶ್, ಅನೇಕ ಯುವ ಕಲಾವಿದರಿಗೆ ಮಾರ್ಗದರ್ಶನ ನೀಡಿ ಹೊಸ ಕಲಾವಿದರನ್ನು ರೂಪಿಸುವಲ್ಲಿಯೂ ಪ್ರಮುಖ ಪಾತ್ರ ವಹಿಸಿದ್ದಾರೆ. ಇಂತಹ ಸಾಧನೆ ಮಾಡಿರುವ 64 ವರ್ಷದ ಹಿರಿಯ ಕಲಾವಿದ ಹಲವು ವರ್ಷಗಳಿಂದ ಪ್ರಶಸ್ತಿಗಾಗಿ ಅರ್ಜಿ ಸಲ್ಲಿಸುತ್ತಿದ್ದರೂ ಇದುವರೆಗೆ ಪ್ರಮುಖ ಪ್ರಶಸ್ತಿಗಳಿಂದ ವಂಚಿತರಾಗಿರುವುದು ವಿಷಾದನೀಯ ಎಂದು ಹೇಳಿದರು.

ಬಯಲಾಟ ಕಲೆಯನ್ನು ಜೀವನೋಪಾಯವಾಗಿಸಿಕೊಂಡಿರುವ ಅಲೆಮಾರಿ ಸಮುದಾಯದ ಅನೇಕ ಕುಟುಂಬಗಳು ಇಂದಿಗೂ ಆರ್ಥಿಕ ಸಂಕಷ್ಟದಲ್ಲಿ ಬದುಕು ಸಾಗಿಸುತ್ತಿವೆ. ಸಮರ್ಪಕ ವಸತಿ, ಮಕ್ಕಳ ಶಿಕ್ಷಣ, ಆರೋಗ್ಯ ಹಾಗೂ ಜೀವನ ಭದ್ರತೆಯಂತಹ ಮೂಲಭೂತ ಸೌಲಭ್ಯಗಳ ಕೊರತೆಯನ್ನು ಎದುರಿಸುತ್ತಿವೆ. ಇಂತಹ ಪರಿಸ್ಥಿತಿಯಲ್ಲಿಯೂ ತಮ್ಮ ಪೂರ್ವಜರಿಂದ ಬಂದ ಕಲೆಯನ್ನು ಉಳಿಸಿಕೊಳ್ಳಲು ಕಲಾವಿದರು ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಅವರ ಪರಿಶ್ರಮವನ್ನು ಗುರುತಿಸುವಲ್ಲಿ ಸರ್ಕಾರ ಹೆಚ್ಚಿನ ಕಾಳಜಿ ವಹಿಸಬೇಕಾಗಿದೆ ಎಂದು ಒತ್ತಾಯಿಸಿದರು.

ಈ ಬಾರಿಯ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗಳಲ್ಲಿಯೂ ವಿವಿಧ ಜಾನಪದ ಕಲಾಪ್ರಕಾರಗಳಿಗೆ ಪ್ರಾತಿನಿಧ್ಯ ನೀಡಲಾಗಿದ್ದರೂ ಬಯಲಾಟ ಕಲಾವಿದರಿಗೆ ಸೂಕ್ತ ಆದ್ಯತೆ ದೊರೆತಿಲ್ಲ. ಪ್ರಶಸ್ತಿಗಳ ಆಯ್ಕೆಯಲ್ಲಿ ರಾಜಕೀಯ ಹಸ್ತಕ್ಷೇಪಕ್ಕೆ ಅವಕಾಶ ನೀಡದೆ, ಅರ್ಹತೆ ಮತ್ತು ಕಲಾಸೇವೆಯ ಆಧಾರದ ಮೇಲೆ ಪಾರದರ್ಶಕ ಆಯ್ಕೆ ಪ್ರಕ್ರಿಯೆ ನಡೆಸಬೇಕು ಎಂದು ಆಗ್ರಹಿಸಿದರು.

ಹಿರಿಯ ಕಲಾವಿದರನ್ನು ಗುರುತಿಸಿ ಗೌರವಿಸುವುದು ಕೇವಲ ವ್ಯಕ್ತಿಗತ ಸಾಧನೆಗೆ ನೀಡುವ ಮನ್ನಣೆಯಲ್ಲ. ಅದು ನಶಿಸುತ್ತಿರುವ ಸಾಂಪ್ರದಾಯಿಕ ಕಲಾಪ್ರಕಾರಗಳ ಸಂರಕ್ಷಣೆಗೂ ಉತ್ತೇಜನ ನೀಡುತ್ತದೆ. ಸರ್ಕಾರ ಕಲಾವಿದರನ್ನು ಕಡೆಗಣಿಸಿದರೆ ಮುಂದಿನ ಪೀಳಿಗೆಗೆ ಇಂತಹ ಜಾನಪದ ಕಲೆಗಳನ್ನು ಪರಿಚಯಿಸುವುದು ಕಷ್ಟವಾಗಬಹುದು ಎಂದು ಆತಂಕ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಸಂಬಂಧಪಟ್ಟ ಅಕಾಡೆಮಿಗಳು ಸಣ್ಣ ವೆಂಕಟೇಶ್ ಯಾಪಲದಿನ್ನಿ ಸೇರಿದಂತೆ ಜಿಲ್ಲೆಯ ಹಿರಿಯ ಬಯಲಾಟ ಕಲಾವಿದರ ಸಾಧನೆಗಳನ್ನು ಸಮಗ್ರವಾಗಿ ಪರಿಶೀಲಿಸಿ ಜಿಲ್ಲಾ ಹಾಗೂ ರಾಜ್ಯಮಟ್ಟದ ಪ್ರಶಸ್ತಿಗಳಿಗೆ ಪರಿಗಣಿಸಬೇಕು. ಜೊತೆಗೆ ಬಯಲಾಟ ಕಲಾವಿದರಿಗೆ ಆರ್ಥಿಕ ನೆರವು, ತರಬೇತಿ ಅವಕಾಶಗಳು ಹಾಗೂ ಕಲಾ ಪ್ರದರ್ಶನಗಳಿಗೆ ಅಗತ್ಯ ಪ್ರೋತ್ಸಾಹ ಒದಗಿಸುವ ಮೂಲಕ ಉತ್ತರ ಕರ್ನಾಟಕದ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಲು ಮುಂದಾಗಬೇಕು ಎಂದು ಅಕ್ಬರ್ ಹುಸೇನ್ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಕೊಂಡಯ್ಯ, ಉಮೇಶ್, ಹಿರಿಯ ಬಯಲಾಟ ಕಲಾವಿದ ಸಣ್ಣ ವೆಂಕಟೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮೊದಲನೇ ಪುಟದಿಂದ

ರಾಯಚೂರಿನಿಂದಲೇ ಸಾಮಾಜಿಕ ನ್ಯಾಯ ಸಭೆಗೆ ಚಾಲನೆ: ಎಡಿಜಿಪಿ ಪಿ. ಹರಿಶೇಖರನ್

ಎಸ್. ಮಾತನಾಡಿ, ಜಿಲ್ಲೆಯಲ್ಲಿ ಕೊಲೆ, ಅತ್ಯಾಚಾರ ಸೇರಿದಂತೆ ದೌರ್ಜನ್ಯದ ಹಲವು ಪ್ರಕರಣಗಳು ವರದಿಯಾಗುತ್ತಿದ್ದು, ಅವುಗಳ ತನಿಖೆ ನಡೆಯುತ್ತಿದೆ. ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಸೂಕ್ತ ಕ್ರಮ ಕೈಗೊಳ್ಳುವ ಉದ್ದೇಶದಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯಗಳಿಗಾಗಿ ಸಾಮಾಜಿಕ ನ್ಯಾಯ ಸಭೆ ಆಯೋಜಿಸಲಾಗಿದೆ. ಸಾರ್ವಜನಿಕರು ಈ ಸಭೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಶು ಗಿರಿ ಮಾತನಾಡಿ, ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಸಂಖ್ಯೆ ಹೆಚ್ಚಿನ ಪ್ರಮಾಣದಲ್ಲಿದ್ದು, ಈ ಸಮುದಾಯಗಳ ವಿರುದ್ಧ ದೌರ್ಜನ್ಯ ಪ್ರಕರಣಗಳು ವರದಿಯಾಗುತ್ತಿವೆ. ಜಿಲ್ಲಾ ಪೊಲೀಸ್ ಇಲಾಖೆಯಿಂದ ಪ್ರಕರಣಗಳ ತನಿಖೆ ನಡೆಸಲಾಗುತ್ತಿದೆ. ಹೆಚ್ಚುವರಿ ತನಿಖೆ ಹಾಗೂ ಸಂತ್ರಸ್ತರಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯವು ಸಾಮಾಜಿಕ ನ್ಯಾಯ ಸಭೆ ಆಯೋಜಿಸಿದ್ದು, ಇದಕ್ಕೆ ಜಿಲ್ಲಾ ಪೊಲೀಸ್ ಇಲಾಖೆಯ ಸಂಪೂರ್ಣ ಸಹಕಾರವಿದೆ ಎಂದು ಹೇಳಿದರು.

ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮಹೋಪಾತ್ರ ಮಾತನಾಡಿ, ಜಗತ್ತಿನಲ್ಲಿ ಸಾಮಾಜಿಕ ಸಮಾನತೆ ಮತ್ತು ಏಕತೆಯ ಕುರಿತು ಚರ್ಚಿಸುವಾಗ ಫ್ರೆಂಚ್ ಕ್ರಾಂತಿಯನ್ನು ಉಲ್ಲೇಖಿಸಲಾಗುತ್ತದೆ. ಆದರೆ, 12ನೇ ಶತಮಾನದಲ್ಲಿಯೇ ಸಾಂಸ್ಕೃತಿಕ ನಾಯಕ ಬಸವಣ್ಣನವರು ಸಾಮಾಜಿಕ ಸಮಾನತೆಯ ಕುರಿತು ಪ್ರತಿಪಾದಿಸಿದ್ದರು. ಸಾಮಾಜಿಕ ನ್ಯಾಯ ಒದಗಿಸುವ ಉದ್ದೇಶದಿಂದ ಈಗಾಗಲೇ ವಿವಿಧ ಸಮಿತಿಗಳನ್ನು ರಚಿಸಲಾಗಿದೆ. ಪ್ರತಿಯೊಬ್ಬರಿಗೂ ಸಾಮಾಜಿಕ ನ್ಯಾಯ ದೊರೆಯುವಂತೆ ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು. ಈ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದರ ಜೊತೆಗೆ ಜಾತಿ ಆಧಾರಿತ ತಾರತಮ್ಯವನ್ನು ನಿರ್ಮೂಲನೆ ಮಾಡಬೇಕಾಗಿದೆ ಎಂದು ಅಭಿಪ್ರಾಯಪಟ್ಟರು.

ಸಭೆಯಲ್ಲಿ ವಿವಿಧ ಸಂಘಟನೆಗಳ ಮುಖಂಡರಾದ ಅಂಬಣ್ಣ ಅರೋಲಿಕ್ರ್,ರ ಎಸ್. ರಾಜು, ಕೆ.ಇ. ಕುರ್ಮಾ,ರ ಯಲ್ಲಪ್ಪ, ವೆಂಕಟೇಶ ನಾಯಕ ಅಸ್ಕಿಹಾಳ ಸೇರಿದಂತೆ ಹಲವರು ಮಾತನಾಡಿ, ಜಿಲ್ಲೆಯಲ್ಲಿ ನಡೆದ ಭೂಮಾನಂದ, ಅಶ್ವಿನಿ, ರೇಣಮ್ಮ ಅವರ ಕೊಲೆ ಪ್ರಕರಣಗಳು ಹಾಗೂ ಗಿಲ್ಲೆಸುಗೂರಿನ ಪೆಟ್ರೋಲ್ ಬಂಕ್‌ನಲ್ಲಿ ನಡೆದ ಕೊಲೆ ಪ್ರಕರಣದ ಕುರಿತು ಪ್ರಸ್ತಾಪಿಸಿದರು. ಅಲ್ಲದೆ, ದೇವಿನಗರ ಬಡಾವಣೆಯ ಹರಿಜನ ವಾಡದಲ್ಲಿರುವ ಮದ್ಯದ ಅಂಗಡಿಯನ್ನು ತೆರವುಗೊಳಿಸುವುದು ಸೇರಿದಂತೆ ವಿವಿಧ ಸಮಸ್ಯೆಗಳು ಮತ್ತು ದೌರ್ಜನ್ಯ ಪ್ರಕರಣಗಳ ಕುರಿತು ಗಮನ ಸೆಳೆದರು.

ಈ ಸಮಸ್ಯೆಗಳಿಗೆ ಪ್ರತಿಕ್ರಿಯಿಸಿದ ಎಡಿಜಿಪಿ ಪಿ. ಹರಿಶೇಖರನ್, ಸಭೆಯಲ್ಲಿ ಪ್ರಸ್ತಾಪಿಸಲಾದ ಸಮಸ್ಯೆಗಳು ಗಂಭೀರವಾಗಿದ್ದು, ಅವುಗಳನ್ನು ಬಗೆಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಪಿ. ಹರಿಶೇಖರನ್ ಅವರು ರಚಿಸಿರುವ ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ (ದೌರ್ಜನ್ಯ ಪ್ರತಿಬಂಧ) ಅಧಿನಿಯಮ, 1989 ಹಾಗೂ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ (ದೌರ್ಜನ್ಯ ಪ್ರತಿಬಂಧ) ನಿಯಮಗಳು, 1995 ಕುರಿತ ಪುಸ್ತಕಗಳನ್ನು ಲೋಕಾರ್ಪಣೆಗೊಳಿಸಿ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಡಿಸಿಆರ್‌ಇ ಬಳ್ಳಾರಿ ವಲಯದ ಪೊಲೀಸ್ ಅಧೀಕ್ಷಕ ನವೀನ್, ಕೇಂದ್ರ ವಲಯದ ಪೊಲೀಸ್ ಅಧೀಕ್ಷಕ ಕರಿಬಸನಗೌಡ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಕೃಷ್ಣ ಶಾವಂತಗೇರಾ ಸೇರಿದಂತೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯಗಳ ಮುಖಂಡರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಕುಡಿಯುವ ನೀರಿನ ಕೆರೆ ಭರ್ತಿಗೆ ಅಗತ್ಯ ಕ್ರಮ ಕೈಗೊಳ್ಳಿ: ಎನ್.ಎಸ್. ಬೋಸರಾಜು ಸೂಚನೆ

ಹರಿಯುತ್ತಿರುವ ಸಂದರ್ಭದಲ್ಲಿ ನಿರ್ಲಕ್ಷ್ಯ ವಹಿಸಿದರೆ ಮುಂದಿನ ದಿನಗಳಲ್ಲಿ ಪಟ್ಟಣದ ಜನರು ತೀವ್ರ ಕುಡಿಯುವ ನೀರಿನ ಸಮಸ್ಯೆ ಎದುರಿಸಬೇಕಾಗುತ್ತದೆ. ಹೀಗಾಗಿ ಪುರಸಭೆ ಹಾಗೂ ನೀರಾವರಿ ಇಲಾಖೆ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಿ ಕೆರೆ ಭರ್ತಿಗೆ ಆದ್ಯತೆ ನೀಡಬೇಕು ಎಂದು ಸೂಚಿಸಿದರು.

ಇದೇ ಸಂದರ್ಭದಲ್ಲಿ ಮಾನ್ವಿ ಪಟ್ಟಣಕ್ಕೆ ಕುಡಿಯುವ ನೀರು ಪೂರೈಸುವ ಉದ್ದೇಶದಿಂದ ಕೈಗೆತ್ತಿಕೊಂಡಿರುವ ಅಮೃತ್ 2.0 ಯೋಜನೆಯ ಕಾಮಗಾರಿಯ ಪ್ರಗತಿ ಕುರಿತು ಪರಿಶೀಲಿಸಿದರು.

ಅಮೃತ್ 2.0 ಯೋಜನೆಯ ಕಾಮಗಾರಿ ನಿಧಾನಗತಿಯಲ್ಲಿ ಸಾಗುತ್ತಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಬೋಸರಾಜು, ಕುಡಿಯುವ ನೀರಿನಂತಹ ಅತ್ಯಗತ್ಯ ಸೌಲಭ್ಯಕ್ಕೆ ಸಂಬಂಧಿಸಿದ ಕಾಮಗಾರಿಗಳನ್ನು ವಿಳಂಬ ಮಾಡುವುದು ಸರಿಯಲ್ಲ. ಗುತ್ತಿಗೆದಾರರು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಕಾಮಗಾರಿಗೆ ವೇಗ ನೀಡಿ ಶೀಘ್ರ ಪೂರ್ಣಗೊಳಿಸಬೇಕು ಎಂದು ಸೂಚಿಸಿದರು.

ಪಟ್ಟಣದ ಜನರಿಗೆ ಸಮರ್ಪಕ ಹಾಗೂ ನಿರಂತರ ಕುಡಿಯುವ ನೀರು ಪೂರೈಸುವುದು ಸ್ಥಳೀಯ ಆಡಳಿತದ ಪ್ರಮುಖ ಜವಾಬ್ದಾರಿಯಾಗಿದೆ. ಬೇಸಿಗೆಯಲ್ಲಿ ನೀರಿನ ಅಭಾವ ಉಂಟಾದ ನಂತರ ಪರ್ಯಾಯ ವ್ಯವಸ್ಥೆ ಹುಡುಕುವ ಬದಲು ಈಗಿನಿಂದಲೇ ಅಗತ್ಯ ಯೋಜನೆ ರೂಪಿಸಿ ಕಾರ್ಯಗತಗೊಳಿಸಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಶಾಸಕ ಹಂಪಯ್ಯ ನಾಯಕ, ಸಿರವಾರ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಬ್ರಿಜೇಶ್ ಪಾಟೀಲ್, ಮುಖಂಡರಾದ ಎ. ಬಾಲಸ್ವಾಮಿ ಕೊಡ್ಲಿ, ರೌಡ್ರು ಮಹಾಂತೇಶ ಸ್ವಾಮಿ, ಸಾಬೀರ್ ಪಾಷಾ, ಜಯಪ್ರಕಾಶ್, ರಾಮಕೃಷ್ಣ, ಡಿ. ನಾಗೇಶ್ ಕಬ್ಬ್ಯಾ,ರ ಸತ್ತಾರ್ ಬಂಗ್ಲೆವಾಲೆ, ಕಾಮೇಶ್, ಪುರಸಭೆ ಆರೋಗ್ಯ ನಿರೀಕ್ಷಕ ಮಹೇಶ್ ಕುರ್ಮಾ,ರ ನೀರಾವರಿ ಇಲಾಖೆ ಅಧಿಕಾರಿಗಳು, ಪುರಸಭೆ ಸಿಬ್ಬಂದಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ತಿಡಿಗೋಳ ಗ್ರಾಮದಲ್ಲಿ ದಲಿತರಿಗೆ ದೇವಸ್ಥಾನ ಪ್ರವೇಶ: ಸಾಮಾಜಿಕ ಸಮಾನತೆಗೆ ಐತಿಹಾಸಿಕ ಹೆಜ್ಜೆ

ಆಶಯ ವ್ಯಕ್ತವಾಯಿತು. ಇದರ ಫಲವಾಗಿ ದಲಿತ ಸಮುದಾಯದವರಿಗೆ ದೇವಸ್ಥಾನ ಪ್ರವೇಶಿಸಲು ಅವಕಾಶ ಕಲ್ಪಿಸಲಾಯಿತು.

ದೇವಸ್ಥಾನ ಪ್ರವೇಶಿಸಿದ ದಲಿತ ಸಮುದಾಯದವರು ಸಂತಸ ವ್ಯಕ್ತಪಡಿಸಿದ್ದು, ಈ ಬೆಳವಣಿಗೆ ಅವರ ಆತ್ಮಗೌರವ ಹಾಗೂ ಸಮಾನ ಹಕ್ಕುಗಳ ದೃಷ್ಟಿಯಿಂದ ಮಹತ್ವದ ಹೆಜ್ಜೆಯಾಗಿದೆ. ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಪ್ರತಿಪಾದಿಸಿದ ಸಮಾನತೆ, ಸ್ವಾತಂತ್ರ್ಯ, ಸಹೋದರತೆ ಮತ್ತು ಸಾಮಾಜಿಕ ನ್ಯಾಯದ ತತ್ವಗಳು ಸಮಾಜದ ಪ್ರತಿಯೊಂದು ಹಂತದಲ್ಲಿಯೂ ಅನುಷ್ಠಾನಗೊಳ್ಳಬೇಕೆಂಬ ಸಂದೇಶವನ್ನು ಈ ಘಟನೆ ಸಾರಿದೆ.

ಇದೇ ಸಂದರ್ಭದಲ್ಲಿ ದಲಿತ ಸಮುದಾಯದ ಶೈಕ್ಷಣಿಕ ಅಭಿವೃದ್ಧಿ, ಉದ್ಯೋಗಾವಕಾಶಗಳ ಸೃಷ್ಟಿ ಹಾಗೂ ಗ್ರಾಮದಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ವಿಷಯಗಳ ಬಗ್ಗೆಯೂ ಚರ್ಚಿಸಲಾಯಿತು. ಸಮುದಾಯದ ಸಾಮಾಜಿಕ ಮತ್ತು ಆರ್ಥಿಕ ಪ್ರಗತಿಗೆ ಪೂರಕವಾದ ಕ್ರಮಗಳನ್ನು ಕೈಗೊಳ್ಳುವ ಕುರಿತು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಭರವಸೆ ನೀಡಿದರು.

ಗ್ರಾಮದಲ್ಲಿ ಎಲ್ಲ ಸಮುದಾಯಗಳ ಜನರು ಪರಸ್ಪರ ಗೌರವ, ವಿಶ್ವಾಸ ಮತ್ತು ಸಹಬಾಳ್ವೆಯಿಂದ ಜೀವನ ನಡೆಸುವ ವಾತಾವರಣ ನಿರ್ಮಾಣವಾಗಬೇಕು. ಸಾಮಾಜಿಕ ಅಸಮಾನತೆ ಹಾಗೂ ಜಾತಿ ಆಧಾರಿತ ತಾರತಮ್ಯ ನಿವಾರಣೆಗೆ ಸಾರ್ವಜನಿಕರು ಮತ್ತು ಸ್ಥಳೀಯ ಮುಖಂಡರು ಸಹಕಾರ ನೀಡಬೇಕು ಎಂಬ ಅಭಿಪ್ರಾಯ ಸಭೆಯಲ್ಲಿ ವ್ಯಕ್ತವಾಯಿತು.

ಸಂವಿಧಾನವು ಪ್ರತಿಯೊಬ್ಬ ನಾಗರಿಕನಿಗೂ ನೀಡಿರುವ ಸಮಾನತೆಯ ಹಕ್ಕು ಕೇವಲ ಕಾನೂನಿನ ಆಶಯವಾಗಿ ಉಳಿಯದೆ, ಸಾಮಾಜಿಕ ಬದುಕಿನಲ್ಲಿಯೂ ಅನುಷ್ಠಾನಗೊಳ್ಳಬೇಕಾಗಿದೆ. ಈ ನಿಟ್ಟಿನಲ್ಲಿ ತಿಡಿಗೋಳ ಗ್ರಾಮದಲ್ಲಿ ನಡೆದ ದೇವಸ್ಥಾನ ಪ್ರವೇಶದ ಬೆಳವಣಿಗೆ ಸಾಮಾಜಿಕ ಸಾಮರಸ್ಯ ಮತ್ತು ಸಮಾನತೆಯತ್ತ ಇಟ್ಟ ಮಹತ್ವದ ಹೆಜ್ಜೆಯಾಗಿ ಗುರುತಿಸಿಕೊಂಡಿದೆ.

ಜಿಲ್ಲಾಡಳಿತದ ಮಧ್ಯಸ್ಥಿಕೆಯಲ್ಲಿ ಶಾಂತಿಯುತವಾಗಿ ಸಮಸ್ಯೆ ಬಗೆಹರಿದಿರುವುದು ಗ್ರಾಮದಲ್ಲಿ ಹೊಸ ಸೌಹಾರ್ದ ವಾತಾವರಣ ನಿರ್ಮಾಣಕ್ಕೆ ಪೂರಕವಾಗಿದ್ದು, ಸಾಮಾಜಿಕ ನ್ಯಾಯ ಹಾಗೂ ಮಾನವೀಯ ಮೌಲ್ಯಗಳನ್ನು ಎತ್ತಿಹಿಡಿಯುವ ಘಟನೆಯಾಗಿ ಮಹತ್ವ ಪಡೆದುಕೊಂಡಿದೆ.

ನಾಗಡದಿನ್ನಿ ಗ್ರಾಮದಲ್ಲಿ ವಿಬಿಜಿರಾಮ್ ಜಿ ಯೋಜನೆ ಕುರಿತು ಜಾಗೃತಿ ಕಾರ್ಯಕ್ರಮ

ಅರಕೇರಾ, ನ.3: ಗ್ರಾಮೀಣ ಪ್ರದೇಶದ ಕೂಲಿ ಕಾರ್ಮಿಕರಿಗೆ ಉದ್ಯೋಗಾವಕಾಶ ಕಲ್ಪಿಸುವುದು ಹಾಗೂ ಅವರ ಆರ್ಥಿಕ ಸ್ಥಿತಿಯನ್ನು ಸುಧಾರಿಸುವ ಉದ್ದೇಶದಿಂದ ತಾಲೂಕಿನ ನಾಗಡದಿನ್ನಿ ಗ್ರಾಮದಲ್ಲಿ ವಿಬಿಜಿರಾಮ್ ಜಿ ಯೋಜನೆ ಕುರಿತು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.



ಕಾರ್ಯಕ್ರಮದಲ್ಲಿ ತಾಲೂಕು ಐಇಸಿ ಸಂಯೋಜಕ ಅಮರೇಶ್ ಮಾತನಾಡಿ, ಗ್ರಾಮೀಣ ಕೂಲಿ ಕಾರ್ಮಿಕರಿಗೆ ಸ್ಥಳೀಯ ಮಟ್ಟದಲ್ಲಿಯೇ ಉದ್ಯೋಗಾವಕಾಶ ಒದಗಿಸುವ ಮೂಲಕ ಅವರ ಜೀವನಮಟ್ಟ ಸುಧಾರಿಸುವುದು ಯೋಜನೆಯ ಪ್ರಮುಖ ಉದ್ದೇಶವಾಗಿದೆ. ಯೋಜನೆಯ ಸೌಲಭ್ಯಗಳನ್ನು ಅರ್ಹ ಕಾರ್ಮಿಕರು ಸದುಪಯೋಗಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗಾವಕಾಶಗಳನ್ನು ಹೆಚ್ಚಿಸುವುದರಿಂದ ಕೂಲಿ ಕಾರ್ಮಿಕರು ಕೆಲಸ ಅರಸಿ ನಗರ ಪ್ರದೇಶಗಳಿಗೆ ವಲಸೆ ಹೋಗುವುದನ್ನು ಕಡಿಮೆ ಮಾಡಲು ಸಾಧ್ಯವಾಗುತ್ತದೆ. ಸ್ಥಳೀಯವಾಗಿಯೇ ಉದ್ಯೋಗ ದೊರೆತರೆ ಕಾರ್ಮಿಕ ಕುಟುಂಬಗಳಿಗೆ ಆರ್ಥಿಕ ಭದ್ರತೆ ಒದಗಿಸಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ಯೋಜನೆಯಡಿ ವಾರ್ಷಿಕ ಉದ್ಯೋಗ ಖಾತರಿಯ ಮಾನವ ದಿನಗಳನ್ನು 100ರಿಂದ 125 ದಿನಗಳಿಗೆ ಹೆಚ್ಚಿಸಲಾಗಿದೆ. ದಿನಗೂಲಿಯನ್ನು ₹370ರಿಂದ ₹382ಕ್ಕೆ ಹೆಚ್ಚಿಸಲಾಗಿದ್ದು, ಒಂದು ಜಾಬ್ ಕಾರ್ಡ್ ಮೂಲಕ ವಾರ್ಷಿಕವಾಗಿ ₹47,750ರವರೆಗೆ ಕೂಲಿ ಪಡೆಯುವ ಅವಕಾಶವಿದೆ ಎಂದು ಯೋಜನೆಯ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಯೋಜನೆಯಡಿ ವೈಯಕ್ತಿಕ ಹಾಗೂ ಸಮುದಾಯ ಆಧಾರಿತ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಅವಕಾಶವಿದೆ. ಗ್ರಾಮೀಣ ಮೂಲಸೌಕರ್ಯಗಳ ಅಭಿವೃದ್ಧಿಯ ಜೊತೆಗೆ ಕೂಲಿ ಕಾರ್ಮಿಕರಿಗೆ ನಿರಂತರ ಉದ್ಯೋಗ ಒದಗಿಸುವ ಉದ್ದೇಶ ಹೊಂದಲಾಗಿದೆ ಎಂದು ವಿವರಿಸಿದರು.

ಗಂಡು ಮತ್ತು ಹೆಣ್ಣು ಕಾರ್ಮಿಕರಿಗೆ ಸಮಾನ ಕೆಲಸಕ್ಕೆ ಸಮಾನ ಕೂಲಿ ನೀಡಲಾಗುತ್ತದೆ. ಕೆಲಸಕ್ಕೆ ತೆರಳುವ ಮಹಿಳಾ ಕಾರ್ಮಿಕರು ಮೂರು ವರ್ಷದೊಳಗಿನ ಮಕ್ಕಳನ್ನು ಕೂಸಿನ ಮನೆಯಲ್ಲಿ ದಾಖಲಿಸುವ ಮೂಲಕ ಮಕ್ಕಳ ಆರೈಕೆಗೆ ಲಭ್ಯವಿರುವ ಸೌಲಭ್ಯಗಳನ್ನು ಬಳಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಅಂಗವಿಕಲರು, ಗರ್ಭಿಣಿಯರು ಹಾಗೂ 65 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಯೋಜನೆಯಡಿ ಲಭ್ಯವಿರುವ ವಿಶೇಷ ಸೌಲಭ್ಯಗಳ ಕುರಿತು ಮಾಹಿತಿ ನೀಡಲಾಯಿತು. ಕಾರ್ಮಿಕರು ತಮ್ಮ ಕುಟುಂಬದ ಆರ್ಥಿಕ ಸುರಕ್ಷತೆಯ ದೃಷ್ಟಿಯಿಂದ ಜೀವ ವಿಮೆ ಮಾಡಿಸಿಕೊಳ್ಳುವಂತೆಯೂ ತಿಳಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಕೂಲಿ ಕಾರ್ಮಿಕರಿಗೆ ಯೋಜನೆಯ ಉದ್ದೇಶ, ಅರ್ಹತೆ ಹಾಗೂ ಸೌಲಭ್ಯಗಳ ಕುರಿತು ಮಾಹಿತಿ ಒಳಗೊಂಡ ಕರಪತ್ರಗಳನ್ನು ವಿತರಿಸಲಾಯಿತು. ನಿರಂತರವಾಗಿ ಉದ್ಯೋಗ ಪಡೆಯಲು ಆಸಕ್ತಿ ಹೊಂದಿರುವ ಕೂಲಿ ಕಾರ್ಮಿಕರಿಂದ ನಮೂನೆ 6ರ ಮೂಲಕ ಕೆಲಸಕ್ಕಾಗಿ ಅರ್ಜಿಗಳನ್ನು ಸ್ವೀಕರಿಸಲಾಯಿತು.

ಈ ಸಂದರ್ಭದಲ್ಲಿ ತಾಲೂಕು ಐಇಸಿ ಸಂಯೋಜಕ ಅಮರೇಶ್, ಬಿಎಫ್‌ಟಿ ಮಹ್ಮದ್ ಜಾವೀದ್, ಗ್ರಾಮ ಪಂಚಾಯಿತಿ ಸಿಬ್ಬಂದಿ, ಮೇಟ್ಸ್ ಹಾಗೂ ಗ್ರಾಮದ ಕೂಲಿ ಕಾರ್ಮಿಕರು ಉಪಸ್ಥಿತರಿದ್ದರು.

ಪಂಚ ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪುವಂತೆ ನೋಡಿಕೊಳ್ಳಿ: ಪಿ.ಟಿ. ಪರಮೇಶ್ವರ ನಾಯ್ಕ



ರಾಯಚೂರು, ನ.3 (ಕರ್ನಾಟಕ ವಾರ್ತೆ): ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪುವಂತೆ ನೋಡಿಕೊಳ್ಳಬೇಕು. ಯೋಜನೆಗಳು ದುರುಪಯೋಗವಾಗದಂತೆ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಪಿ.ಟಿ. ಪರಮೇಶ್ವರ ನಾಯ್ಕ ಸೂಚಿಸಿದರು.

ಮಂಗಳವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶಕ್ತಿ ಯೋಜನೆಯಡಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಬಸ್‌ಗಳಲ್ಲಿ ಪ್ರಯಾಣಿಸುತ್ತಿದ್ದು, ಅವರಿಗೆ ಬಸ್ ನಿಲ್ದಾಣಗಳಲ್ಲಿ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಬೇಕು. ಬಸ್ ನಿಲ್ದಾಣಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳ ಅಳವಡಿಕೆ, ಶೌಚಾಲಯಗಳ ಸ್ವಚ್ಛತೆ ಹಾಗೂ ತಾಯಂದಿರಿಗೆ ಹಾಲುಣಿಸುವ ಪ್ರತ್ಯೇಕ ಕೊಠಡಿಗಳ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು ಎಂದು ಸಾರಿಗೆ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಆಯಾ ತಾಲೂಕುಗಳಿಗೆ ಸಂಬಂಧಿಸಿದ ಗ್ಯಾರಂಟಿ ಯೋಜನೆಗಳ ಸಮಿತಿ ಪ್ರತಿನಿಧಿಗಳನ್ನು ಕರೆದು ಬಸ್ ನಿಲ್ದಾಣಗಳಲ್ಲಿನ ಪರಿಸ್ಥಿತಿಯನ್ನು ಪರಿಶೀಲಿಸಬೇಕು. ಸ್ವಚ್ಛತೆ ಹಾಗೂ ನಿರ್ವಹಣೆಯ ಜವಾಬ್ದಾರಿ ಪಡೆದಿರುವ ಗುತ್ತಿಗೆದಾರರು ಸಮರ್ಪಕವಾಗಿ ಕಾರ್ಯನಿರ್ವಹಿಸದಿದ್ದರೆ ಅವರ ಗುತ್ತಿಗೆಗಳನ್ನು ರದ್ದುಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲೆಯ ಎಂಟು ತಾಲೂಕುಗಳ ಗ್ರಾಮ ಪಂಚಾಯಿತಿಗಳು, ನಗರ ಪ್ರದೇಶಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಕುರಿತು ಸಮಗ್ರ ಮಾಹಿತಿ ಒದಗಿಸಬೇಕು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳು ಸೇರಿದಂತೆ ಎಲ್ಲ ಸಮುದಾಯಗಳ ಫಲಾನುಭವಿಗಳ ವಿವರಗಳನ್ನು ಇಲಾಖೆಗಳು ಹೊಂದಿರಬೇಕು ಎಂದು ಹೇಳಿದರು.

ಐದು ಗ್ಯಾರಂಟಿ ಯೋಜನೆಗಳಿಗೆ ಸಂಬಂಧಿಸಿದ ಅಧಿಕಾರಿಗಳು ಯೋಜನೆಗಳ ಕಾರ್ಯಕ್ರಮಗಳ ಮಾಹಿತಿಯನ್ನು ಗ್ಯಾರಂಟಿ ಅನುಷ್ಠಾನ ಸಮಿತಿಯ ಸದಸ್ಯರಿಗೆ ತಿಳಿಸಬೇಕು. ಸಮಿತಿಯ ಸದಸ್ಯರ ಸಹಭಾಗಿತ್ವದಲ್ಲಿಯೇ ಕಾರ್ಯಕ್ರಮಗಳನ್ನು ಆಯೋಜಿಸುವಂತೆ ಮುಖ್ಯಮಂತ್ರಿಗಳು ಸೂಚಿಸಿದ್ದು, ಈ ನಿರ್ದೇಶನವನ್ನು ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ಪಾಲಿಸಬೇಕು ಎಂದು ತಿಳಿಸಿದರು.

ಅಧಿಕಾರಿಗಳು ಹಾಗೂ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಪದಾಧಿಕಾರಿಗಳ ಸಹಕಾರದಿಂದ ಯೋಜನೆಗಳು ಯಶಸ್ವಿಯಾಗಿ ಅನುಷ್ಠಾನಗೊಳ್ಳುತ್ತಿವೆ. ರಾಯಚೂರು ಜಿಲ್ಲೆಯ ಗ್ಯಾರಂಟಿ ಯೋಜನೆಗಳ ಸಮಿತಿಯ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಹಾಗೂ ಅಧಿಕಾರಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿರುವುದರಿಂದ ಸಾರ್ವಜನಿಕರಿಗೆ ಯೋಜನೆಗಳ ಪ್ರಯೋಜನ ದೊರೆಯುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಗೃಹಲಕ್ಷ್ಮೀ ಯೋಜನೆಯಡಿ ರಾಯಚೂರು ಜಿಲ್ಲೆಯಲ್ಲಿ ಒಟ್ಟು 4,61,629 ಫಲಾನುಭವಿಗಳು ನೋಂದಣಿಯಾಗಿದ್ದು, ಅವರಲ್ಲಿ 4,36,460 ಫಲಾನುಭವಿಗಳಿಗೆ ಮಾಸಿಕ ₹2,000ರಂತೆ ಜುಲೈ 2026ರ ಅಂತ್ಯದವರೆಗೆ ಒಟ್ಟು ₹2,744.81 ಕೋಟಿ ಪಾವತಿಸಲಾಗಿದೆ ಎಂದು ಮಾಹಿತಿ ನೀಡಿದರು.

ಅನ್ನಭಾಗ್ಯ ಯೋಜನೆಯಡಿ ಜಿಲ್ಲೆಯಲ್ಲಿ ಒಟ್ಟು 4,57,145 ಫಲಾನುಭವಿಗಳು ನೋಂದಣಿಯಾಗಿದ್ದು, ಇದುವರೆಗೆ ₹806.22 ಕೋಟಿ ವೆಚ್ಚ ಭರಿಸಲಾಗಿದೆ. ಗೃಹಜ್ಯೋತಿ ಯೋಜನೆಯಡಿ 3,14,741 ಫಲಾನುಭವಿಗಳು ನೋಂದಣಿಯಾಗಿದ್ದು, ₹557.31 ಕೋಟಿ ವೆಚ್ಚ ಮಾಡಲಾಗಿದೆ ಎಂದು ವಿವರಿಸಿದರು.

ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ ವಯಸ್ಕರು ಹಾಗೂ ಮಕ್ಕಳು ಸೇರಿದಂತೆ ಒಟ್ಟು 14.59 ಕೋಟಿ ಪ್ರಯಾಣಗಳು ದಾಖಲಾಗಿದ್ದು, ಇದಕ್ಕಾಗಿ ₹618.03 ಕೋಟಿ ವೆಚ್ಚ ಭರಿಸಲಾಗಿದೆ. ಯುವನಿಧಿ ಯೋಜನೆಯಡಿ ಪದವಿ ಹಾಗೂ ಡಿಪ್ಲೊಮಾ ಪೂರೈಸಿದ 27,876 ಅಭ್ಯರ್ಥಿಗಳು ನೋಂದಣಿಯಾಗಿದ್ದು, ಇದುವರೆಗೆ ₹78.87 ಕೋಟಿ ವೆಚ್ಚ ಭರಿಸಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ನೀಡಿರುವ ಸೂಚನೆಗಳನ್ನು ಸಂಬಂಧಪಟ್ಟ ಎಲ್ಲ ಇಲಾಖೆಗಳ ಅಧಿಕಾರಿಗಳು ಕಡ್ಡಾಯವಾಗಿ ಪಾಲಿಸಬೇಕು. ಕೈಗೊಂಡ ಕ್ರಮಗಳ ಕುರಿತು ಅನುಪಾಲನಾ ವರದಿಯನ್ನು ಸಲ್ಲಿಸಬೇಕು. ಪಂಚ ಗ್ಯಾರಂಟಿ ಯೋಜನೆಗಳು ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಕಾರ್ಯಕ್ರಮಗಳಾಗಿದ್ದು, ಅವುಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಅಧಿಕಾರಿಗಳು ಹೆಚ್ಚಿನ ಆದ್ಯತೆ ನೀಡಬೇಕು. ಇನ್ನೂ ಕೆಲವು ತಿಂಗಳುಗಳ ಬಾಕಿ ಇರುವ ಹಣವನ್ನು ಬಿಡುಗಡೆ ಮಾಡಲಾಗುವುದು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಪಾಮಯ್ಯ ಮುರಾಗಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರಕುಮಾರ್ ಕಾಂದೂ, ಮುಖ್ಯ ಯೋಜನಾಧಿಕಾರಿ ಡಾ. ಟಿ. ರೋಣಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ನಾಗೇಂದ್ರ, ರಾಮಣ್ಣ ಇರಬಗೇರಾ, ಗಫೂರ್ ಸಾಬ್, ಹನುಮಂತಪ್ಪ ಜಾಲಿಬೆಂಚಿ, ಶೇಖರಗೌಡ ತುರವಿಹಾಳ, ಸದಸ್ಯರಾದ ಬಿ.ಕೆ. ಅಂಬರೇಷಪ್ಪ, ಪವನ ಕಿಶೋರ್ ಪಾಟೀಲ್, ಲಕ್ಷ್ಮಣ, ಮಹಬೂಬ್ ಸಾಬ್, ಅನಿಲ್ ಕುರ್ಮಾ, ವೆಂಕಟೇಶ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಕೊಲೆಯಾದ ಬಾಪುರ ನರಸಿಂಹ ಶೆಟ್ಟಿ ಕುಟುಂಬಕ್ಕೆ ಆರ್ಯವೈಶ್ಯ ಸಂಘದಿಂದ ₹2 ಲಕ್ಷ ಆರ್ಥಿಕ ನೆರವು



ಮಾನ್ವಿ: ರಾಯಚೂರಿನಲ್ಲಿ ಇತ್ತೀಚೆಗೆ ದುಷ್ಕರ್ಮಿಯಿಂದ ಹತ್ಯೆಗೀಡಾದ ಆರ್ಯವೈಶ್ಯ ಸಮುದಾಯದ ಸಣ್ಣ ವ್ಯಾಪಾರಿ ದಿವಂಗತ ಬಾಪುರ ನರಸಿಂಹ ಶೆಟ್ಟಿ ಅವರ ಕುಟುಂಬಕ್ಕೆ ಮಾನ್ವಿ ತಾಲೂಕು ಶ್ರೀ ನಗರೇಶ್ವರ ಆರ್ಯವೈಶ್ಯ ಸಂಘದ ವತಿಯಿಂದ ₹2 ಲಕ್ಷ ಆರ್ಥಿಕ ನೆರವು ನೀಡಲಾಯಿತು.

ಮಾನ್ವಿ ತಾಲೂಕು ಶ್ರೀ ನಗರೇಶ್ವರ ಆರ್ಯವೈಶ್ಯ ಸಂಘದ ಅಧ್ಯಕ್ಷ ಆರ್. ಮುತ್ತುರಾಜ್ ಶೆಟ್ಟಿ ಅವರು ಸಂಘದ ಪದಾಧಿಕಾರಿಗಳು ಹಾಗೂ ಸಮಾಜದ ಮುಖಂಡರ ಸಮ್ಮುಖದಲ್ಲಿ ಮೃತರ ಕುಟುಂಬಕ್ಕೆ ₹2 ಲಕ್ಷ ಸಹಾಯಧನ ಹಸ್ತಾಂತರಿಸಿದರು.

ಬಾಪುರ ನರಸಿಂಹ ಶೆಟ್ಟಿ ಅವರ ಅಕಾಲಿಕ ನಿಧನದಿಂದ ಕುಟುಂಬವು ತೀವ್ರ ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ ಮಾನವೀಯ ನೆಲೆಯಲ್ಲಿ ನೆರವು ನೀಡುವ ಉದ್ದೇಶದಿಂದ ಸಂಘದ ವತಿಯಿಂದ ಆರ್ಥಿಕ ಸಹಾಯ ಒದಗಿಸಲಾಗಿದೆ.

ಸಮಾಜದ ಸದಸ್ಯರು ಸಂಕಷ್ಟಕ್ಕೆ ಸಿಲುಕಿದ ಸಂದರ್ಭದಲ್ಲಿ ಅವರ ಕುಟುಂಬಗಳಿಗೆ ನೆರವಾಗುವುದು ಸಂಘದ ಸಾಮಾಜಿಕ ಜವಾಬ್ದಾರಿಯಾಗಿದೆ. ಇಂತಹ ಕಷ್ಟದ ಸಂದರ್ಭಗಳಲ್ಲಿ ಸಮುದಾಯದವರು ಒಗ್ಗಟ್ಟಿನಿಂದ ನಿಂತು ಸಂತ್ರಸ್ತ ಕುಟುಂಬಗಳಿಗೆ ಧೈರ್ಯ ತುಂಬುವ ಅಗತ್ಯವಿದೆ ಎಂಬ ಆಶಯದೊಂದಿಗೆ ನೆರವು ನೀಡಲಾಯಿತು.

ಈ ಸಂದರ್ಭದಲ್ಲಿ ಸಂಘದ ಕಾರ್ಯದರ್ಶಿ ಬಿ. ಈರಣ್ಣ, ಆರ್. ದ್ವಾರಕನಾಥ, ಆರ್. ಪುರುಷೋತ್ತಮ, ಆರ್. ಪಾಂಡುರಂಗ, ಇ. ಬಸವ ಪ್ರಕಾಶ, ಆರ್. ನಾಗರಾಜ, ಆರ್. ಮಂಜುನಾಥ, ಬಿ. ವೀರೇಶಬಾಬು, ಎಂ. ಕೇಶವಯ್ಯ, ಡಿ. ಮಂಜುನಾಥ, ಕೆ. ರಾಮಚಂದ್ರ, ಆರ್. ಸತೀಶಚಂದ್ರ, ಎಸ್. ಪ್ರಾಣೇಶ, ಬಿ. ಶಶಿಧರ ಸೇರಿದಂತೆ ಮಾನ್ವಿ ಹಾಗೂ ರಾಯಚೂರು ಆರ್ಯವೈಶ್ಯ ಸಮಾಜದ ಮುಖಂಡರು ಉಪಸ್ಥಿತರಿದ್ದರು.

ಮದ್ಯವ್ಯಸನದಿಂದ ಆರೋಗ್ಯ, ಕುಟುಂಬದ ನೆಮ್ಮದಿ ಹಾಳು: ಪಿಎಸ್‌ಐ ದಾದಾ ವಲಿ



ರಾಯಚೂರು, ನ.3: ಮದ್ಯಸೇವನೆಯು ವ್ಯಕ್ತಿಯ ದೈಹಿಕ ಮತ್ತು ಮಾನಸಿಕ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವುದರ ಜೊತೆಗೆ ಕುಟುಂಬದ ನೆಮ್ಮದಿ, ಆರ್ಥಿಕ ಸ್ಥಿರತೆ ಹಾಗೂ ಸಾಮಾಜಿಕ ಜೀವನಕ್ಕೂ ಧಕ್ಕೆ ಉಂಟುಮಾಡುತ್ತದೆ. ಯುವಜನರು ದುಶ್ಚಟಗಳಿಂದ ದೂರವಿದ್ದು ಆರೋಗ್ಯಕರ ಜೀವನಶೈಲಿ ಅಳವಡಿಸಿಕೊಳ್ಳಬೇಕು ಎಂದು ಸದರ್ ಬಜಾರ್ ಪೊಲೀಸ್ ಠಾಣೆಯ ಸಬ್ ಇನ್‌ಸ್ಪೆಕ್ಟರ್ ದಾದಾ ವಲಿ ಕರೆ ನೀಡಿದರು.

ನಗರದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ (ಎನ್ ಎಸ್‌ಎಸ್) ಘಟಕದ ವತಿಯಿಂದ 202627ನೇ ಸಾಲಿನ ವಾರ್ಷಿಕ ವಿಶೇಷ ಶಿಬಿರದ ಅಂಗವಾಗಿ ನವೆಂಬರ್ 3ರಂದು ಬಹೇರೂನ್‌ಖಿಲ್ಲಾ ಪ್ರದೇಶದಲ್ಲಿ ಆಯೋಜಿಸಿದ್ದ ಮದ್ಯವ್ಯಸನದ ದುಷ್ಪರಿಣಾಮಗಳ ಕುರಿತ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮದ್ಯವ್ಯಸನವು ವ್ಯಕ್ತಿಯ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುವುದಲ್ಲದೆ ಕುಟುಂಬದ ಆರ್ಥಿಕ ಪರಿಸ್ಥಿತಿಯನ್ನೂ ಹದಗೆಡಿಸುತ್ತದೆ. ನಿರಂತರ ಮದ್ಯಸೇವನೆಯಿಂದ ಯಕೃತ್ತಿನ ಕಾಯಿಲೆಗಳು, ಮಾನಸಿಕ ಒತ್ತಡ, ಆರ್ಥಿಕ ಸಂಕಷ್ಟ ಹಾಗೂ ಕೌಟುಂಬಿಕ ಕಲಹಗಳು ಉಂಟಾಗುವ ಸಾಧ್ಯತೆಯಿದೆ. ಮದ್ಯವ್ಯಸನಕ್ಕೆ ಒಳಗಾದ ವ್ಯಕ್ತಿಯೊಂದಿಗೆ ಆತನ ಕುಟುಂಬದ ಸದಸ್ಯರೂ ಹಲವು ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ ಎಂದು ವಿವರಿಸಿದರು.

ವಿಶೇಷವಾಗಿ ವಿದ್ಯಾರ್ಥಿಗಳು ಹಾಗೂ ಯುವಜನರು ಮದ್ಯಪಾನ ಸೇರಿದಂತೆ ಎಲ್ಲ ರೀತಿಯ ದುಶ್ಚಟಗಳಿಂದ ದೂರವಿರಬೇಕು. ವಿದ್ಯಾರ್ಥಿ ಜೀವನವು ವ್ಯಕ್ತಿತ್ವ ನಿರ್ಮಾಣದ ಪ್ರಮುಖ ಹಂತವಾಗಿದ್ದು, ಈ ಅವಧಿಯಲ್ಲಿ ಉತ್ತಮ ಅಭ್ಯಾಸಗಳನ್ನು ಬೆಳೆಸಿಕೊಳ್ಳಬೇಕು. ಶಿಕ್ಷಣ, ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆಗಳು ಹಾಗೂ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಳ್ಳುವ ಮೂಲಕ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಮದ್ಯವ್ಯಸನದ ದುಷ್ಪರಿಣಾಮಗಳ ಕುರಿತು ವಿದ್ಯಾರ್ಥಿಗಳು ಸ್ವತಃ ಅರಿವು ಹೊಂದುವುದರ ಜೊತೆಗೆ ತಮ್ಮ ಕುಟುಂಬ, ಸ್ನೇಹಿತರು ಹಾಗೂ ಸಾರ್ವಜನಿಕರಲ್ಲಿಯೂ ಜಾಗೃತಿ ಮೂಡಿಸಬೇಕು. ಸಮಾಜದಲ್ಲಿ ಮದ್ಯವ್ಯಸನದಿಂದ ಉಂಟಾಗುವ ಸಮಸ್ಯೆಗಳನ್ನು ಕಡಿಮೆ ಮಾಡಲು ಯುವಜನರ ಸಹಭಾಗಿತ್ವ ಅತ್ಯಂತ ಅಗತ್ಯವಾಗಿದೆ. ವ್ಯಸನಮುಕ್ತ ಹಾಗೂ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಎನ್‌ಎಸ್‌ಎಸ್ ಸ್ವಯಂಸೇವಕರು ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಆರಂಭದಲ್ಲಿ ಕಾಲೇಜಿನ ಉಪನ್ಯಾಸಕ ಮಹಮ್ಮದ್ ಖಾಜಾ ಅವರು ಎನ್ ಎಸ್‌ಎಸ್ ಧ್ವಜಾರೋಹಣ ನೆರವೇರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಾ. ರವೀಂದ್ರ ಎಸ್. ಬಂಡಿ ಅವರು ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆಯು ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಜವಾಬ್ದಾರಿ, ಶಿಸ್ತು, ಸೇವಾ ಮನೋಭಾವ ಹಾಗೂ ಉತ್ತಮ ಜೀವನ ಮೌಲ್ಯಗಳನ್ನು ಬೆಳೆಸುವ ಪ್ರಮುಖ ವೇದಿಕೆಯಾಗಿದೆ. ವಿದ್ಯಾರ್ಥಿಗಳು ಶಿಬಿರದಲ್ಲಿ ಪಡೆದುಕೊಂಡ ಜ್ಞಾನವನ್ನು ತಮ್ಮ ದೈನಂದಿನ ಜೀವನದಲ್ಲಿ ಅಳವಡಿಸಿಕೊಂಡು ಸಮಾಜದ ಒಳಿತಿಗಾಗಿ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಮಹಿಬೂಬ್ ಸಾಬ್ ಅವರು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿ, ಶಿಬಿರದ ಉದ್ದೇಶ ಹಾಗೂ ಸಾಮಾಜಿಕ ಜಾಗೃತಿ ಕಾರ್ಯಕ್ರಮಗಳಲ್ಲಿ ಸ್ವಯಂಸೇವಕರ ಪಾತ್ರದ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಉಪನ್ಯಾಸಕರು ಹಾಗೂ ಎನ್‌ಎಸ್‌ಎಸ್ ಸ್ವಯಂಸೇವಕರು ಭಾಗವಹಿಸಿದ್ದರು. ಮದ್ಯಸೇವನೆಯಿಂದ ದೂರವಿರಿ, ಆರೋಗ್ಯಕರ ಜೀವನ ನಡೆಸಿರಿ, ವ್ಯಸನಮುಕ್ತ ಸಮಾಜ ನಿರ್ಮಿಸಿರಿ ಎಂಬ ಸಂದೇಶದೊಂದಿಗೆ ಜಾಗೃತಿ ಕಾರ್ಯಕ್ರಮ ಮುಕ್ತಾಯಗೊಂಡಿತು.

ಮೊಬೈಲ್ ದುರ್ಬಳಕೆ ಮತ್ತು ಸೈಬರ್ ವಂಚನೆ ತಡೆಗೆ ಜಾಗೃತಿ ಅಗತ್ಯ: ರಾಮಣ್ಣ ಗಣೇಕಲ್



ದೇವದುರ್ಗ: ಮೊಬೈಲ್‌ಗಳ ಅತಿಯಾದ ಬಳಕೆ, ಅಪರಿಚಿತ ಸಂದೇಶಗಳು, ಆನ್ ಲೈನ್ ಗೇಮ್‌ಗಳು ಹಾಗೂ ಹೆಚ್ಚುತ್ತಿರುವ ಸೈಬರ್ ವಂಚನೆಗಳ ಕುರಿತು ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಕ್ರೈ ಸಂಸ್ಥೆಯ ವತಿಯಿಂದ ತಾಲೂಕಿನ ಮುಷ್ಟೂರು ಗ್ರಾಮದ ಶಾಲೆಯಲ್ಲಿ ಜನಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಶಾಲಾ ವಿದ್ಯಾರ್ಥಿಗಳು ಕಿರು ನಾಟಕ ಪ್ರದರ್ಶಿಸುವ ಮೂಲಕ ಮೊಬೈಲ್ ಬಳಕೆಯಲ್ಲಿ ವಹಿಸಬೇಕಾದ ಮುನ್ನೆಚ್ಚರಿಕೆಗಳು, ಆನ್‌ಲೈನ್ ಗೇಮ್‌ಗಳ ದುಷ್ಪರಿಣಾಮಗಳು ಹಾಗೂ ಅಪರಿಚಿತರ ಸಂಪರ್ಕದಿಂದ ಎದುರಾಗಬಹುದಾದ ಸೈಬರ್ ವಂಚನೆಗಳ ಕುರಿತು ಜಾಗೃತಿ ಮೂಡಿಸಿದರು.

ಮೊಬೈಲ್‌ಗೆ ಬರುವ ಅಪರಿಚಿತ ಸಂದೇಶಗಳು, ಅನುಮಾನಾಸ್ಪದ ಲಿಂಕ್‌ಗಳು ಹಾಗೂ ಆನ್‌ಲೈನ್ ಮೂಲಕ ಪರಿಚಯವಾಗುವ ವ್ಯಕ್ತಿಗಳೊಂದಿಗೆ ವ್ಯವಹರಿಸುವಾಗ ಎಚ್ಚರಿಕೆ ವಹಿಸುವ ಅಗತ್ಯವಿದೆ ಎಂಬ ಸಂದೇಶವನ್ನು ನಾಟಕದ ಮೂಲಕ ವಿದ್ಯಾರ್ಥಿಗಳು ಪರಿಣಾಮಕಾರಿಯಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ರಾಮಣ್ಣ ಗಣೇಕಲ್, ಇಂದಿನ ತಂತ್ರಜ್ಞಾನ ಯುಗದಲ್ಲಿ ಮೊಬೈಲ್ ಮತ್ತು ಇಂಟರ್‌ನೆಟ್ ಬಳಕೆ ಅನಿವಾರ್ಯವಾಗಿದ್ದರೂ ಅವುಗಳನ್ನು ಅಗತ್ಯಕ್ಕೆ ತಕ್ಕಂತೆ ಬಳಸಿಕೊಳ್ಳಬೇಕು. ವಿಶೇಷವಾಗಿ ಮಕ್ಕಳು ಮೊಬೈಲ್‌ಗಳ ಅತಿಯಾದ ಬಳಕೆಯಿಂದ ದೂರವಿದ್ದು, ಪುಸ್ತಕ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು. ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಅತಿಯಾದ ಮೊಬೈಲ್ ಬಳಕೆಯಿಂದ ಮಕ್ಕಳ ಕಣ್ಣಿನ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುವ ಸಾಧ್ಯತೆಯಿದೆ. ನಿರಂತರವಾಗಿ ಮೊಬೈಲ್‌ನಲ್ಲಿ ತೊಡಗಿಸಿಕೊಳ್ಳುವುದರಿಂದ ಓದಿನ ಕಡೆ ಗಮನ ಕಡಿಮೆಯಾಗುವುದರ ಜೊತೆಗೆ ಮಾನಸಿಕ ಒತ್ತಡವೂ ಹೆಚ್ಚಾಗಬಹುದು. ಆದ್ದರಿಂದ ಮಕ್ಕಳು ಸಮಯವನ್ನು ಸಮರ್ಪಕವಾಗಿ ಬಳಸಿಕೊಂಡು ಓದು, ಆಟೋಟ ಹಾಗೂ ಇತರ ಸೃಜನಶೀಲ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ತಿಳಿಸಿದರು.

ಮಕ್ಕಳು ಸರಿಯಾದ ಸಮಯಕ್ಕೆ ಊಟ ಮಾಡುವುದು, ಸಾಕಷ್ಟು ನೀರು ಕುಡಿಯುವುದು ಹಾಗೂ ಆರೋಗ್ಯಕರ ಜೀವನಶೈಲಿ ಅಳವಡಿಸಿಕೊಳ್ಳುವುದು ಮುಖ್ಯವಾಗಿದೆ. ತಂದೆ-ತಾಯಿಯ ಮಾರ್ಗದರ್ಶನಕ್ಕೆ ಗೌರವ ನೀಡಿ, ಉತ್ತಮ ಅಭ್ಯಾಸಗಳನ್ನು ರೂಢಿಸಿಕೊಳ್ಳುವ ಮೂಲಕ ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ಹೇಳಿದರು.

ಸೈಬರ್ ವಂಚನೆಗಳ ಬಗ್ಗೆ ವಿದ್ಯಾರ್ಥಿಗಳು ಮಾತ್ರವಲ್ಲದೆ ಪಾಲಕರು ಹಾಗೂ ಸಾರ್ವಜನಿಕರೂ ಜಾಗೃತರಾಗಬೇಕು. ಅಪರಿಚಿತ ವ್ಯಕ್ತಿಗಳಿಂದ ಬರುವ ಸಂದೇಶಗಳಿಗೆ ಪ್ರತಿಕ್ರಿಯಿಸುವಾಗ ಎಚ್ಚರಿಕೆ ವಹಿಸಬೇಕು. ಮೊಬೈಲ್ ಮತ್ತು ಇಂಟರ್‌ನೆಟ್ ಗಳನ್ನು ಶಿಕ್ಷಣ ಹಾಗೂ ಜ್ಞಾನಾರ್ಜನೆಗೆ ಪೂರಕವಾಗಿ ಬಳಸಿಕೊಳ್ಳಬೇಕು ಎಂಬ ಸಂದೇಶವನ್ನು ಕಾರ್ಯಕ್ರಮದಲ್ಲಿ ನೀಡಲಾಯಿತು.

ಜಾಗೃತಿ ಅಭಿಯಾನದ ಅಂಗವಾಗಿ ಶಾಲಾ ಶಿಕ್ಷಕರು ಹಾಗೂ ಸಿಬ್ಬಂದಿ ಸೈಬರ್ ಸುರಕ್ಷತೆಗೆ ಸಂಬಂಧಿಸಿದ ಜಾಗೃತಿ ಪೋಸ್ಟರ್‌ಗಳನ್ನು ಶಾಲೆಯ ಗೋಡೆಗಳಿಗೆ ಅಂಟಿಸುವ ಮೂಲಕ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು.

ಕಾರ್ಯಕ್ರಮದಲ್ಲಿ ದೇವದುರ್ಗ ಸಮಾಜ ಕಲ್ಯಾಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಿಬ್ಬಂದಿ, ಕ್ರೈ ಸಂಸ್ಥೆಯ ಪ್ರತಿನಿಧಿಗಳು, ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್‌ಡಿಎಂಸಿ) ಅಧ್ಯಕ್ಷ ವೆಂಕಟೇಶ, ನಾಗರತ್ನ, ಖಾಜಾಬಿ, ರೇಣುಕಾ, ಸವಿತಾ, ಮುಷ್ಟೂರು ಶಾಲೆಯ ಶಿಕ್ಷಕರು, ಇಸಿಒ ಶರಣಪ್ಪ, ಗಂಗಾಧರ, ಆನಂದ, ನೀಲಗಲ್, ಆಲಿಯಾ ಬೇಗಂ ಹಾಗೂ ಮಲ್ಲಯ್ಯ ಖಾನಾಪುರ ಉಪಸ್ಥಿತರಿದ್ದರು.

ಬಸ್ ನಿಲ್ದಾಣದ ಶೌಚಾಲಯದ ಸೆಪ್ಟಿಕ್ ಟ್ಯಾಂಕ್ ಭರ್ತಿ: ದುರ್ವಾಸನೆಯಿಂದ ನಿವಾಸಿಗಳ

ಲಿಂಗಸುಗೂರು: ಪಟ್ಟಣದ ಪುರಸಭೆ ವ್ಯಾಪ್ತಿಯ 7ನೇ ವಾರ್ಡ್‌ನ ಹೊಸ ಬಸ್ ನಿಲ್ದಾಣದ ಸಮೀಪವಿರುವ ಸಾರ್ವಜನಿಕ ಶೌಚಾಲಯದ ಸೆಪ್ಟಿಕ್ ಟ್ಯಾಂಕ್ ತುಂಬಿ, ಮಲಿನ ನೀರು ಚರಂಡಿ ಮೂಲಕ ಹಳ್ಳಕ್ಕೆ ಹರಿಯುತ್ತಿರುವುದರಿಂದ ಸುತ್ತಮುತ್ತಲಿನ ನಿವಾಸಿಗಳು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಕೂಡಲೇ ಸೆಪ್ಟಿಕ್ ಟ್ಯಾಂಕ್ ಖಾಲಿ ಮಾಡಿಸಿ ಸ್ವಚ್ಛತೆ ಕಾಪಾಡುವಂತೆ ಆಗ್ರಹಿಸಿ ವಾರ್ಡ್‌ನ ನಾಗರಿಕರು ಪುರಸಭೆಗೆ ಮನವಿ ಸಲ್ಲಿಸಿದರು.

ಪಟ್ಟಣದ ಹೊಸ ಬಸ್ ನಿಲ್ದಾಣ ಹಾಗೂ ಎಂಪೈರ್ ಚಿತ್ರಮಂದಿರದ ಸಮೀಪವಿರುವ ಸಾರ್ವಜನಿಕ ಮತ್ತು ಪ್ರಯಾಣಿಕರ ಶೌಚಾಲಯದ ಸೆಪ್ಟಿಕ್ ಟ್ಯಾಂಕ್ ತುಂಬಿದ್ದರೂ ಸಂಬಂಧಪಟ್ಟವರು ಅದನ್ನು ಖಾಲಿ ಮಾಡಿಸಲು ಕ್ರಮ ಕೈಗೊಂಡಿಲ್ಲ. ಪರಿಣಾಮ ಶೌಚಾಲಯದ ಮಲಿನ ನೀರು ಚರಂಡಿಯ ಮೂಲಕ ಸಮೀಪದ ಹಳ್ಳಕ್ಕೆ ಹರಿಯುತ್ತಿದ್ದು, ಸುತ್ತಮುತ್ತಲಿನ ಪ್ರದೇಶದಲ್ಲಿ ತೀವ್ರ ದುರ್ವಾಸನೆ ಉಂಟಾಗಿದೆ ಎಂದು ನಿವಾಸಿಗಳು ಆರೋಪಿಸಿದರು.

ಹಳ್ಳದ ಸಮೀಪದಲ್ಲಿಯೇ ಹಲವು ಕುಟುಂಬಗಳು ವಾಸಿಸುತ್ತಿದ್ದು, ಶೌಚಾಲಯದ ಮಲಿನ ನೀರಿನಿಂದ ಉಂಟಾಗುತ್ತಿರುವ ದುರ್ವಾಸನೆಯಿಂದ ಮನೆಯ ಹೊರಗೆ ಬರಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ. ಪ್ರತಿನಿತ್ಯ ದುರ್ವಾಸನೆ ಸಹಿಸಿಕೊಂಡು ಜೀವನ ನಡೆಸಬೇಕಾದ ಅನಿವಾರ್ಯತೆ ಎದುರಾಗಿದ್ದು, ಸಾರ್ವಜನಿಕರ ಆರೋಗ್ಯದ ಮೇಲೂ ದುಷ್ಪರಿಣಾಮ ಬೀರುವ ಆತಂಕ ಉಂಟಾಗಿದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಮನೆಗಳ ಮುಂದೆ ಚಿಕ್ಕ ಮಕ್ಕಳು ಆಟವಾಡುತ್ತಿದ್ದು, ಹಿರಿಯ ನಾಗರಿಕರೂ ಇದೇ ಪರಿಸರದಲ್ಲಿ ವಾಸಿಸುತ್ತಿದ್ದಾರೆ. ಮಲಿನ ನೀರು ನಿಂತು ಸೊಳ್ಳೆಗಳ ಉತ್ಪತ್ತಿಗೆ ಕಾರಣವಾದರೆ ಮಲೇರಿಯಾ, ಡೆಂಗಿ ಸೇರಿದಂತೆ ಸೊಳ್ಳೆಗಳಿಂದ ಹರಡುವ ರೋಗಗಳ ಅಪಾಯ ಹೆಚ್ಚಾಗಬಹುದು. ಅಶುಚಿತ್ವದಿಂದ ಇತರ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆಯೂ ಇರುವುದರಿಂದ ಕೂಡಲೇ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸಮಸ್ಯೆಯ ಕುರಿತು ಈಗಾಗಲೇ ಎರಡು ಮೂರು ಬಾರಿ ಬಸ್ ಡಿಪೋ ಅಧಿಕಾರಿಗಳನ್ನು ಖುದ್ದಾಗಿ ಭೇಟಿಯಾಗಿ ಮೌಖಿಕವಾಗಿ ದೂರು ನೀಡಲಾಗಿದೆ. ಸಾರ್ವಜನಿಕರ ಮನವಿಯ ಮೇರೆಗೆ ಸಂಬಂಧಪಟ್ಟವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರೂ ಇದುವರೆಗೆ ಯಾವುದೇ ಪರಿಣಾಮಕಾರಿ ಕ್ರಮ ಕೈಗೊಂಡಿಲ್ಲ ಎಂದು ನಿವಾಸಿಗಳು ಅಸಮಾಧಾನ ವ್ಯಕ್ತಪಡಿಸಿದರು.

ಸಾರ್ವಜನಿಕ ಶೌಚಾಲಯದ ನಿರ್ವಹಣೆಯ ಜವಾಬ್ದಾರಿ ಹೊಂದಿರುವ ಗುತ್ತಿಗೆದಾರರು ಸೆಪ್ಟಿಕ್ ಟ್ಯಾಂಕ್ ತುಂಬಿದ ಕೂಡಲೇ ಅದನ್ನು ನಿಯಮಾನುಸಾರ ಖಾಲಿ ಮಾಡಿಸಬೇಕು. ಆದರೆ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ವಹಿಸಿರುವುದರಿಂದ ಸಾರ್ವಜನಿಕರು ತೊಂದರೆ ಅನುಭವಿಸುವಂತಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಶೌಚಾಲಯದ ನಿರ್ವಹಣಾ ವ್ಯವಸ್ಥೆಯನ್ನು ಪರಿಶೀಲಿಸಿ ಕರ್ತವ್ಯಲೋಪ ಕಂಡುಬಂದಲ್ಲಿ ಗುತ್ತಿಗೆದಾರರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಸಾರ್ವಜನಿಕರ ಆರೋಗ್ಯ ಮತ್ತು ಸ್ವಚ್ಛತೆಯ ವಿಷಯದಲ್ಲಿ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಬಾರದು. ಕೂಡಲೇ ಸೆಪ್ಟಿಕ್ ಟ್ಯಾಂಕ್ ಖಾಲಿ ಮಾಡಿಸಿ, ಚರಂಡಿ ಹಾಗೂ ಹಳ್ಳಕ್ಕೆ ಮಲಿನ ನೀರು ಹರಿಯುವುದನ್ನು ತಡೆಗಟ್ಟಬೇಕು. ಶೌಚಾಲಯದ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛಗೊಳಿಸಿ ಅಗತ್ಯ ನೈರ್ಮಲ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಮನವಿ ಮಾಡಿದರು.



ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಶೌಚಾಲಯದ ಸೆಪ್ಟಿಕ್ ಟ್ಯಾಂಕ್ ಅನ್ನು ನಿಯಮಿತವಾಗಿ ಸ್ವಚ್ಛಗೊಳಿಸುವ ವ್ಯವಸ್ಥೆ ಜಾರಿಗೊಳಿಸಬೇಕು. ಸಾರ್ವಜನಿಕರು ಹಾಗೂ ಪ್ರಯಾಣಿಕರಿಗೆ ಅನುಕೂಲವಾಗುವಂತೆ ಶೌಚಾಲಯವನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರಾಚಪ್ಪ, ನಾರಾಯಣ, ಅಮರಗುಂಡಪ್ಪ, ಭೀಮರಾಯ, ಆನಂದ್ ಸಿಂಗ್, ಪ್ರದೀಪ್, ನರಸಿಂಹ ರೆಡ್ಡಿ, ಸಂಗನಗೌಡ, ದೊಡ್ಡನಗೌಡ ಪಾಟೀಲ್ ಸೇರಿದಂತೆ ವಾರ್ಡ್‌ನ ಅನೇಕ ನಾಗರಿಕರು ಉಪಸ್ಥಿತರಿದ್ದರು.

ಆಶಾಪೂರ ರಸ್ತೆಯ ಬಡಾವಣೆಗಳಲ್ಲಿ ನುಸಿ ಹುಳಗಳ ಹಾವಳಿ: ನಿಯಂತ್ರಣಕ್ಕೆ ನಿವಾಸಿಗಳ ಆಗ್ರಹ



ರಾಯಚೂರು, ನ.3: ನಗರದ ಆಶಾಪೂರ ರಸ್ತೆಯಲ್ಲಿರುವ ಭಾರತೀಯ ಆಹಾರ ನಿಗಮದ (ಎಫ್‌ಸಿಐ) ಗೋದಾಮಿನ ಸುತ್ತಮುತ್ತಲಿನ ಬಡಾವಣೆಗಳಲ್ಲಿ ನುಸಿ ಹುಳಗಳ ಹಾವಳಿ ಹೆಚ್ಚಾಗಿದ್ದು, ಸ್ಥಳೀಯ ನಿವಾಸಿಗಳು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ನುಸಿ ಹುಳಗಳ ನಿಯಂತ್ರಣಕ್ಕೆ ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ವಿವಿಧ ಬಡಾವಣೆಗಳ ನಿವಾಸಿಗಳು ಆಗ್ರಹಿಸಿದ್ದಾರೆ.

ಆಶಾಪೂರ ರಸ್ತೆಯ ಆಫೀಸರ್ ಕಾಲೋನಿ, ರಾಜಮಾತಾ ಕಾಲೋನಿ, ವಿಜಯನಗರ ಕಾಲೋನಿ, ನಜರಾಯ ಕಾಲೋನಿ, ಪದ್ಮಾವತಿ ಕಾಲೋನಿ ಹಾಗೂ ಜನತಾ ಕಾಲೋನಿ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ನುಸಿ ಹುಳಗಳ ಹಾವಳಿ ಹೆಚ್ಚಾಗಿದೆ. ಇದರಿಂದಾಗಿ ಸಾರ್ವಜನಿಕರ ದೈನಂದಿನ ಜೀವನಕ್ಕೆ ತೊಂದರೆಯಾಗುತ್ತಿದ್ದು, ವಿಶೇಷವಾಗಿ ಮಕ್ಕಳು ಮತ್ತು ವಯೋವೃದ್ಧರು ಸಮಸ್ಯೆ ಎದುರಿಸುತ್ತಿದ್ದಾರೆ ಎಂದು ನಿವಾಸಿಗಳು ದೂರಿದ್ದಾರೆ.

ಭಾರತೀಯ ಆಹಾರ ನಿಗಮದ ಗೋದಾಮಿನಲ್ಲಿ ಸಂಗ್ರಹಿಸಲಾಗಿರುವ ಆಹಾರ ಧಾನ್ಯಗಳ ದಾಸ್ತಾನಿನಿಂದ ನುಸಿ ಹುಳಗಳು ಹರಡುತ್ತಿದ್ದು, ಗಾಳಿಯ ಮೂಲಕ ಸಮೀಪದ ಬಡಾವಣೆಗಳ ಮನೆಗಳಿಗೆ ಪ್ರವೇಶಿಸುತ್ತಿವೆ ಎಂದು ನಿವಾಸಿಗಳು ಆರೋಪಿಸಿದ್ದಾರೆ. ಮನೆಯ ಅಡುಗೆ ಕೋಣೆ, ಮಲಗುವ ಕೋಣೆ, ಪೀಠೋಪಕರಣಗಳು ಸೇರಿದಂತೆ ಎಲ್ಲೆಡೆ ನುಸಿ ಹುಳಗಳು ಕಾಣಿಸಿಕೊಳ್ಳುತ್ತಿವೆ. ಊಟಕ್ಕೆ ಕುಳಿತಾಗ ಆಹಾರದ ತಟ್ಟೆಯಲ್ಲಿಯೂ ನುಸಿ ಹುಳಗಳು ಬೀಳುತ್ತಿರುವುದರಿಂದ ನೆಮ್ಮದಿಯಿಂದ ಊಟ ಮಾಡಲೂ ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಅಳಲು ತೋಡಿಕೊಂಡಿದ್ದಾರೆ.

ನುಸಿ ಹುಳಗಳ ನಿರಂತರ ಹಾವಳಿಯಿಂದ ಮನೆಗಳಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳುವುದು ಕಷ್ಟವಾಗುತ್ತಿದ್ದು, ಆಹಾರ ಪದಾರ್ಥಗಳು ಕಲುಷಿತಗೊಳ್ಳುವ ಆತಂಕ ಎದುರಾಗಿದೆ. ಅಲ್ಲದೆ, ಮಕ್ಕಳ ಹಾಗೂ ವಯೋವೃದ್ಧರ ಆರೋಗ್ಯದ ಮೇಲೂ ದುಷ್ಪರಿಣಾಮ ಉಂಟಾಗುವ ಭೀತಿ ನಿವಾಸಿಗಳನ್ನು ಕಾಡುತ್ತಿದೆ.

ಈ ಸಮಸ್ಯೆಯನ್ನು ಸಂಬಂಧಪಟ್ಟ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ, ಭಾರತೀಯ ಆಹಾರ ನಿಗಮದ ಗೋದಾಮು ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪರಿಶೀಲನೆ ನಡೆಸಬೇಕು. ನುಸಿ ಹುಳಗಳ ಹಾವಳಿಗೆ ನಿಖರ ಕಾರಣ ಪತ್ತೆಹಚ್ಚಿ, ವೈಜ್ಞಾನಿಕ ವಿಧಾನದಲ್ಲಿ ಕೀಟ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಬೇಕು. ಅಗತ್ಯವಿದ್ದಲ್ಲಿ ಗೋದಾಮುಗಳ ಸ್ವಚ್ಛತೆ, ಆಹಾರ ಧಾನ್ಯಗಳ ಸಂಗ್ರಹಣಾ ವ್ಯವಸ್ಥೆ ಹಾಗೂ ಕೀಟ ನಿಯಂತ್ರಣ ಕಾರ್ಯಾಚರಣೆಯನ್ನು ಪರಿಶೀಲಿಸಬೇಕು ಎಂದು ನಿವಾಸಿಗಳು ಒತ್ತಾಯಿಸಿದ್ದಾರೆ.

ಸಂಬಂಧಪಟ್ಟ ಇಲಾಖೆ ಮತ್ತು ಮಹಾನಗರ ಪಾಲಿಕೆ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ, ಸಾರ್ವಜನಿಕರಿಗೆ ಉಂಟಾಗುತ್ತಿರುವ ತೊಂದರೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕು. ಸಮಸ್ಯೆ ಮತ್ತಷ್ಟು ಉಲ್ಬಣಗೊಳ್ಳುವ ಮುನ್ನವೇ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಸ್ಥಳೀಯ ನಿವಾಸಿಗಳಾದ ನಾಗೇಂದ್ರ, ನರಸಪ್ಪ, ನಾಗಭೂಷಣ, ಮದನರೆಡ್ಡಿ, ರಘು, ಸಂತೋಷ, ಸತ್ಯನಾರಾಯಣ ಹಾಗೂ ಕೆ. ಸಂತೋಷ ಕುಮಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಲಾಂಛನ ಬಿಡುಗಡೆ: ನ.14 ಮತ್ತು 15ರಂದು ಸಮ್ಮೇಳನ



ರಾಯಚೂರು: ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ನವೆಂಬರ್ 14 ಮತ್ತು 15ರಂದು ನಡೆಯಲಿರುವ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಲಾಂಛನವನ್ನು ವಿಧಾನ ಪರಿಷತ್ ಸದಸ್ಯ ಹಾಗೂ ಸಮ್ಮೇಳನ ಸ್ವಾಗತ ಸಮಿತಿ ಅಧ್ಯಕ್ಷ ಎನ್.ಎಸ್. ಬೋಸರಾಜು ಬಿಡುಗಡೆ ಮಾಡಿದರು.

ನಗರದ ಖಾಸಗಿ ಹೋಟೆಲ್‌ನಲ್ಲಿ ಮಂಗಳವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸಮ್ಮೇಳನದ ಲಾಂಛನ ಅನಾವರಣಗೊಳಿಸಿ ಮಾತನಾಡಿದ ಅವರು, ಹಲವು ವರ್ಷಗಳ ನಂತರ ರಾಯಚೂರು ನಗರದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಆಯೋಜಿಸಲಾಗುತ್ತಿದೆ. ಸಮ್ಮೇಳನವನ್ನು ಅರ್ಥಪೂರ್ಣವಾಗಿ ಹಾಗೂ ಯಶಸ್ವಿಯಾಗಿ ನಡೆಸಲು ಈಗಾಗಲೇ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ ಹಾಗೂ ಜಿಲ್ಲೆಯ ಐತಿಹಾಸಿಕ ಪರಂಪರೆಯನ್ನು ಪರಿಚಯಿಸುವ ನಿಟ್ಟಿನಲ್ಲಿ ಸಮ್ಮೇಳನಕ್ಕೆ ವಿಶೇಷ ಮಹತ್ವವಿದೆ. ಜಿಲ್ಲೆಯ ಸಾಹಿತಿಗಳು, ಕನ್ನಡಪರ ಸಂಘಟನೆಗಳು, ಸಾಹಿತ್ಯಾಸಕ್ತರು ಹಾಗೂ ಸಾರ್ವಜನಿಕರು ಸಮ್ಮೇಳನದ ಯಶಸ್ಸಿಗೆ ಸಹಕಾರ ನೀಡಬೇಕು. ಎಲ್ಲರ ಸಹಭಾಗಿತ್ವದೊಂದಿಗೆ ಸಮ್ಮೇಳನವನ್ನು ವೈಶಿಷ್ಟ್ಯಪೂರ್ಣವಾಗಿ ನಡೆಸಲು ಉದ್ದೇಶಿಸಲಾಗಿದೆ ಎಂದು ಹೇಳಿದರು.

ಮಾಜಿ ಶಾಸಕ ಹಾಗೂ ಸಮ್ಮೇಳನ ಸ್ವಾಗತ ಸಮಿತಿ ಗೌರವಾಧ್ಯಕ್ಷ ಎ. ಪಾಪಾರೆಡ್ಡಿ ಮಾತನಾಡಿ, ತಾವು ನಗರಸಭೆ ಅಧ್ಯಕ್ಷರಾಗಿದ್ದ ಸಂದರ್ಭದಲ್ಲಿ ರಾಯಚೂರು ನಗರದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಆಯೋಜಿಸಲಾಗಿತ್ತು. ಅದರ ನಂತರ ಇದೀಗ ಮತ್ತೆ ನಗರದಲ್ಲಿ ಸಮ್ಮೇಳನ ನಡೆಯುತ್ತಿರುವುದು ಸಂತಸದ ಸಂಗತಿಯಾಗಿದೆ ಎಂದು ತಿಳಿಸಿದರು.

ಜಿಲ್ಲೆಯ ಸಾಹಿತ್ಯಿಕ ಪರಂಪರೆ ಹಾಗೂ ಕನ್ನಡದ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಪ್ರತಿಬಿಂಬಿಸುವ ರೀತಿಯಲ್ಲಿ ಸಮ್ಮೇಳನವನ್ನು ಅದ್ಧೂರಿಯಾಗಿ ಆಯೋಜಿಸಬೇಕು. ಈ ನಿಟ್ಟಿನಲ್ಲಿ ಸ್ವಾಗತ ಸಮಿತಿ ಪದಾಧಿಕಾರಿಗಳು, ಕನ್ನಡಪರ ಸಂಘಟನೆಗಳು ಹಾಗೂ ಸಾಹಿತ್ಯಾಸಕ್ತರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂದು ಕರೆ ನೀಡಿದರು.

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಸಾಹಿತಿ ವೀರಹನುಮಾನ ಮಾತನಾಡಿ, ರಾಯಚೂರು ಜಿಲ್ಲೆಯ ಐತಿಹಾಸಿಕ, ಸಾಂಸ್ಕೃತಿಕ ಹಾಗೂ ಕೈಗಾರಿಕಾ ವೈಶಿಷ್ಟ್ಯಗಳನ್ನು ಪ್ರತಿಬಿಂಬಿಸುವ ರೀತಿಯಲ್ಲಿ ಸಮ್ಮೇಳನದ ಲಾಂಛನ ರೂಪಿಸಲಾಗಿದೆ. ಜಿಲ್ಲೆಯ ಕೋಟೆ ಕೊತ್ತಲಗಳು, ಹಟ್ಟಿ ಚಿನ್ನದ ಗಣಿ, ರಾಯಚೂರು ಶಾಖೋತ್ಪನ್ನ ವಿದ್ಯುತ್ ಸ್ಥಾವರ (ಆರ್‌ಟಿಪಿಎಸ್) ಸೇರಿದಂತೆ ಜಿಲ್ಲೆಯ ಪ್ರಮುಖ ಸ್ಥಳಗಳು ಹಾಗೂ ಹೆಗ್ಗುರುತುಗಳನ್ನು ಲಾಂಛನದಲ್ಲಿ ಅಳವಡಿಸಲಾಗಿದೆ ಎಂದು ವಿವರಿಸಿದರು.

ಜಿಲ್ಲೆಯ ವೈಶಿಷ್ಟ್ಯಗಳನ್ನು ಒಂದೇ ಲಾಂಛನದಲ್ಲಿ ಪರಿಚಯಿಸುವ ಪ್ರಯತ್ನ ಮಾಡಲಾಗಿದ್ದು, ಸಮ್ಮೇಳನದ ಮೂಲಕ ರಾಯಚೂರಿನ ಸಾಹಿತ್ಯ, ಇತಿಹಾಸ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಜನರಿಗೆ ಪರಿಚಯಿಸಲು ಅವಕಾಶ ದೊರೆಯಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಮ್ಮೇಳನ ಸ್ವಾಗತ ಸಮಿತಿ ಪದಾಧಿಕಾರಿಗಳಾದ ಕೆ. ಶಾಂತಪ್ಪ, ಜಯಣ್ಣ, ರಂಗಣ್ಣ ಪಾಟೀಲ್ ಅಳ್ಳುಂಡಿ, ಬಸವಪ್ರಭು ಪಾಟೀಲ್ ಬೆಟ್ಟದೂರು, ತಾಯಪ್ಪ ಹೊಸೂರು, ಬಾಬು ಭಂಡಾರಿಗಲ್, ವಿಜಯರಾಜೇಂದ್ರ, ಮಂಜುನಾಥ ಕಾಮಿನ್, ರಾವುತರಾವ್ ಬರೂರ ಸೇರಿದಂತೆ ಇತರರು ಉಪಸ್ಥಿತರಿದ್ದರು.

ವಕೀಲರ ಮೇಲಿನ ಹಲ್ಲೆ, ಹತ್ಯೆ ಖಂಡಿಸಿ ನ್ಯಾಯಾಲಯ ಕಲಾಪ ಬಹಿಷ್ಕರಿಸಿ ಪ್ರತಿಭಟನೆ



ಲಿಂಗಸುಗೂರು, ನ.3: ರಾಜ್ಯದ ವಿವಿಧೆಡೆ ವಕೀಲರ ಮೇಲೆ ನಡೆಯುತ್ತಿರುವ ಹಲ್ಲೆ, ದೌರ್ಜನ್ಯ, ಹತ್ಯೆ ಹಾಗೂ ಕೊಲೆ ಯತ್ನದ ಘಟನೆಗಳನ್ನು ತೀವ್ರವಾಗಿ ಖಂಡಿಸಿ, ವಕೀಲರಿಗೆ ಸೂಕ್ತ ಭದ್ರತೆ ಒದಗಿಸುವುದರ ಜೊತೆಗೆ ಸಮಗ್ರ ವಕೀಲರ ರಕ್ಷಣಾ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವಂತೆ ಆಗ್ರಹಿಸಿ ಲಿಂಗಸುಗೂರು ವಕೀಲರ ಸಂಘದ ವತಿಯಿಂದ ಮಂಗಳವಾರ ನ್ಯಾಯಾಲಯದ ಕಲಾಪಗಳನ್ನು ಬಹಿಷ್ಕರಿಸಿ ಪ್ರತಿಭಟನೆ ನಡೆಸಲಾಯಿತು.

ಇತ್ತೀಚೆಗೆ ಬೆಂಗಳೂರಿನ ವೈಟ್ ಫೀಲ್ಡ್‌ನ ವಕೀಲ ಮಂಜುನಾಥ್ ಹಾಗೂ ಅನ್ನಪೂರ್ಣೇಶ್ವರಿ ನಗರದ ವಕೀಲ ಶ್ರೀರಾಮ್ ಅವರ ಹತ್ಯೆ ಮತ್ತು ಗೌರಿಬಿದನೂರಿನ ವಕೀಲ ವೆಂಕಟರಮಣ ಸನ್ನಕ್ಕಿ ಅವರ ಮೇಲಿನ ಕೊಲೆ ಯತ್ನದ ಘಟನೆಗಳಿಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ ವಕೀಲರು, ಇಂತಹ ಘಟನೆಗಳು ಕಾನೂನು ವೃತ್ತಿಯಲ್ಲಿ ತೊಡಗಿರುವವರ ಸುರಕ್ಷತೆಯ ಬಗ್ಗೆ ಆತಂಕ ಮೂಡಿಸಿವೆ ಎಂದು ಕಳವಳ ವ್ಯಕ್ತಪಡಿಸಿದರು.

ನ್ಯಾಯಾಂಗ ವ್ಯವಸ್ಥೆಯ ಪ್ರಮುಖ ಅಂಗವಾಗಿರುವ ವಕೀಲರು ಸಮಾಜದಲ್ಲಿ ನ್ಯಾಯ ಮತ್ತು ಕಾನೂನಿನ ರಕ್ಷಣೆಗಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಆದರೆ, ವಕೀಲರ ಮೇಲೆಯೇ ನಿರಂತರವಾಗಿ ಹಲ್ಲೆ, ಬೆದರಿಕೆ ಹಾಗೂ ದೌರ್ಜನ್ಯಗಳು ನಡೆಯುತ್ತಿರುವುದು ಗಂಭೀರ ವಿಚಾರವಾಗಿದೆ. ಇಂತಹ ಘಟನೆಗಳನ್ನು ತಡೆಗಟ್ಟಲು ಸರ್ಕಾರ ತಕ್ಷಣವೇ ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ವಕೀಲರು ಯಾವುದೇ ಭಯ, ಒತ್ತಡ ಹಾಗೂ ಬೆದರಿಕೆಗಳಿಲ್ಲದೆ ಸ್ವತಂತ್ರವಾಗಿ ವೃತ್ತಿ ನಿರ್ವಹಿಸಲು ಸುರಕ್ಷಿತ ವಾತಾವರಣ ನಿರ್ಮಿಸಬೇಕು. ವಕೀಲರ ಮೇಲಿನ ಹಲ್ಲೆ ಮತ್ತು ಹತ್ಯೆ ಪ್ರಕರಣಗಳ ಆರೋಪಿಗಳನ್ನು ಶೀಘ್ರ ಬಂಧಿಸಿ, ಕಾನೂನು ಪ್ರಕಾರ ಕಠಿಣ ಶಿಕ್ಷೆಗೆ ಒಳಪಡಿಸಲು ಕ್ರಮ ಕೈಗೊಳ್ಳಬೇಕು. ಅಲ್ಲದೆ, ವಕೀಲರ ಹಿತರಕ್ಷಣೆಗಾಗಿ ಸಮಗ್ರ ರಕ್ಷಣಾ ಕಾಯ್ದೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು.

ವಕೀಲರ ಸುರಕ್ಷತೆಯನ್ನು ಖಚಿತಪಡಿಸುವುದು ಸರ್ಕಾರದ ಜವಾಬ್ದಾರಿಯಾಗಿದ್ದು, ಈ ನಿಟ್ಟಿನಲ್ಲಿ ನಿರ್ಲಕ್ಷ್ಯ ವಹಿಸದೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಸಹಾಯಕ ಆಯುಕ್ತರ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಲಿಂಗಸುಗೂರು ತಾಲೂಕು ವಕೀಲರ ಸಂಘದ ಅಧ್ಯಕ್ಷ ಭೂಪನಗೌಡ ಪಾಟೀಲ್, ಕಾರ್ಯದರ್ಶಿ ಈಶ್ವರ ಜಾದವ್, ಆಶಿಕ್ ಅಹ್ಮದ್, ಕೆ. ಚಂದ್ರಶೇಖರ, ಸಂಜೀವ್ ಗೌಡ ಐದಬಾವಿ, ಶಶಿಧರ್ ಹೊಸಮನಿ, ಪ್ರಭುಗೌಡ, ಮೋಹಿನ್ ಪಟೇಲ್, ಶಿವಶಂಕ್ರಪ್ಪ, ಅದಪ್ಪ ನಾಗವೇಣಿ, ಪರಿದಾ ವೀಣಾ ಸೇರಿದಂತೆ ಸಂಘದ ಹಿರಿಯ ಹಾಗೂ ಕಿರಿಯ ವಕೀಲರು ಉಪಸ್ಥಿತರಿದ್ದರು.

ಎಸ್‌ಸಿ, ಎಸ್‌ಟಿ ಮೀಸಲಾತಿ ಹೆಚ್ಚಳ ರಕ್ಷಣೆಗೆ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲು ಆಗ್ರಹ



ರಾಯಚೂರು, ನ.3: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೀಸಲಾತಿ ಹೆಚ್ಚಳಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ನೀಡಿರುವ ಆದೇಶದ ವಿರುದ್ಧ ರಾಜ್ಯ ಸರ್ಕಾರ ಕೂಡಲೇ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಬೇಕು ಹಾಗೂ ಮೀಸಲಾತಿ ಪ್ರಮಾಣವನ್ನು ಶೇ.17 ಮತ್ತು ಶೇ.7ರಂತೆ ಮುಂದುವರಿಸಲು ಅಗತ್ಯ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಮಾದಿಗ ಜಾತಿ ಉಪಜಾತಿ ಸಂಘಟನೆಗಳ ಒಕ್ಕೂಟ ಆಗ್ರಹಿಸಿದೆ.

ರಾಜ್ಯಾದ್ಯಂತ ಹಮ್ಮಿಕೊಂಡಿರುವ ಪ್ರತಿಭಟನೆಯ ಅಂಗವಾಗಿ ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಒಕ್ಕೂಟದ ಪದಾಧಿಕಾರಿಗಳು ಧರಣಿ ನಡೆಸಿ, ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಹಾಗೂ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

ಕರ್ನಾಟಕದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಕಲ್ಪಿಸಬೇಕೆಂಬ ಬೇಡಿಕೆ ಹಲವು ದಶಕಗಳಿಂದ ಕೇಳಿಬರುತ್ತಿದೆ. ಈ ಹಿಂದೆ ಪರಿಶಿಷ್ಟ ಜಾತಿಗಳಿಗೆ ಶೇ.15 ಹಾಗೂ ಪರಿಶಿಷ್ಟ ಪಂಗಡಗಳಿಗೆ ಶೇ.3ರಷ್ಟು ಮೀಸಲಾತಿ ನೀಡಲಾಗುತ್ತಿತ್ತು. ಸುದೀರ್ಘ ಹೋರಾಟಗಳ ಪರಿಣಾಮವಾಗಿ 2022ರಲ್ಲಿ ಅಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ನೇತೃತ್ವದ ಸರ್ಕಾರ ಪರಿಶಿಷ್ಟ ಜಾತಿಗಳ ಮೀಸಲಾತಿಯನ್ನು ಶೇ.17ಕ್ಕೆ ಹಾಗೂ ಪರಿಶಿಷ್ಟ ಪಂಗಡಗಳ ಮೀಸಲಾತಿಯನ್ನು ಶೇ.7ಕ್ಕೆ ಹೆಚ್ಚಿಸಿತ್ತು ಎಂದು ಪ್ರತಿಭಟನಾಕಾರರು ತಿಳಿಸಿದರು.

ಮೀಸಲಾತಿ ಹೆಚ್ಚಳಕ್ಕೆ ಸಂಬಂಧಿಸಿದಂತೆ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್ ದಾಸ್ ಆಯೋಗವು ಸಮಗ್ರ ಅಧ್ಯಯನ ನಡೆಸಿ 2020ರ ಜುಲೈ 2ರಂದು ವರದಿ ಸಲ್ಲಿಸಿತ್ತು. ನಂತರ ನ್ಯಾಯಮೂರ್ತಿ ಸ ಂ ಭ ಾ ಷ ್ ಅಡಿ ನೇತೃತ್ವದ ಸ ್ ವಿ ಂ ತಿ ಯ ಂ ಶಿಫಾರಸುಗಳನ್ನು ಪರಿಗಣಿಸಿ ಮೀಸಲಾತಿ ಹೆಚ್ಚಳಕ್ಕೆ ಕಾನೂನು ರೂಪ ನೀಡಲಾಗಿತ್ತು ಎಂದು ಮನವಿಯಲ್ಲಿ ವಿವರಿಸಲಾಗಿದೆ.

ಆದರೆ, ಮೀಸಲಾತಿ ಹೆಚ್ಚಳದ ಕುರಿತು ನ್ಯಾಯಾಲಯದಲ್ಲಿ ವಿಚಾರಣೆ ನಡೆದ ಸಂದರ್ಭದಲ್ಲಿ ರಾಜ್ಯ ಸರ್ಕಾರ ಸಮರ್ಥವಾಗಿ ವಾದ ಮಂಡಿಸಿಲ್ಲ. ಸರ್ಕಾರದ ನಿರ್ಲಕ್ಷ್ಯದಿಂದ ಪರಿಶಿಷ್ಟ ಜಾತಿಗಳಿಗೆ ಹೆಚ್ಚುವರಿಯಾಗಿ ದೊರೆತಿದ್ದ ಶೇ.2 ಹಾಗೂ ಪರಿಶಿಷ್ಟ ಪಂಗಡಗಳಿಗೆ ದೊರೆತಿದ್ದ ಶೇ.4ರಷ್ಟು ಮೀಸಲಾತಿಗೆ ಧಕ್ಕೆಯಾಗಿದೆ ಎಂದು ಸಂಘಟನೆ ಆರೋಪಿಸಿದೆ.

ಮೀಸಲಾತಿ ಹೆಚ್ಚಳದಿಂದ ಸಾವಿರಾರು ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಹಾಗೂ ಯುವಕರಿಗೆ ಉದ್ಯೋಗಾವಕಾಶಗಳು ದೊರೆತಿವೆ. ಇದೀಗ ಮೀಸಲಾತಿ ಪ್ರಮಾಣ ಕಡಿತಗೊಂಡರೆ ಶೈಕ್ಷಣಿಕ ಮತ್ತು ಉದ್ಯೋಗ ಕ್ಷೇತ್ರಗಳಲ್ಲಿ ಹಿಂದುಳಿದ ಸಮುದಾಯಗಳ ಅವಕಾಶಗಳಿಗೆ ತೊಂದರೆಯಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರವು ಶೇ.15ರ ಮೀಸಲಾತಿಯೊಳಗೆ ಕೈಗೊಂಡಿರುವ ಒಳಮೀಸಲಾತಿ ವರ್ಗೀಕರಣವನ್ನು ಮರುಪರಿಶೀಲಿಸಿ, ಹೊಸದಾಗಿ ಸೃಜಿಸಿರುವ ಎಸ್‌ಸಿ ಸಾಮಾನ್ಯ ಕೋಟಾವನ್ನು ರದ್ದುಪಡಿಸಬೇಕು. 1995ರ ಮೀಸಲಾತಿ ರೋಸ್ಟರ್ ಪದ್ಧತಿಯನ್ನು ಅಳವಡಿಸಿಕೊಳ್ಳಬೇಕು ಹಾಗೂ ಬಡ್ತಿ ಮೀಸಲಾತಿಯಲ್ಲಿಯೂ ಒಳಮೀಸಲಾತಿ ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಭಿವೃದ್ಧಿಗಾಗಿ ಮೀಸಲಿಟ್ಟಿರುವ ವಿಶೇಷ ಘಟಕ ಯೋಜನೆ (ಎಸ್‌ಸಿಪಿ) ಹಾಗೂ ಗಿರಿಜನ ಉಪಯೋಜನೆ (ಟಿಎಸ್‌ಪಿ) ಅನುದಾನವನ್ನು ಇತರ ಉದ್ದೇಶಗಳಿಗೆ ಬಳಸುವುದನ್ನು ನಿಲ್ಲಿಸಬೇಕು. ಈ ಅನುದಾನವನ್ನು ಸಂಬಂಧಪಟ್ಟ ಸಮುದಾಯಗಳ ಶಿಕ್ಷಣ, ಆರೋಗ್ಯ, ವಸತಿ ಮತ್ತು ಮೂಲಸೌಕರ್ಯ ಅಭಿವೃದ್ಧಿಗೆ ಸಮರ್ಪಕವಾಗಿ ವಿನಿಯೋಗಿಸಬೇಕು ಎಂದು ಆಗ್ರಹಿಸಿದರು.

ಸರ್ಕಾರವು ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟವನ್ನು ತೀವ್ರಗೊಳಿಸುವುದಾಗಿ ಪ್ರತಿಭಟನಾಕಾರರು ಎಚ್ಚರಿಸಿದರು.

ಈ ಸಂದರ್ಭದಲ್ಲಿ ನರಸಪ್ಪ ದಂಡೋರ, ರವೀಂದ್ರ ಜಲ್ದಾರ್, ಪಿ. ಯಲ್ಲಪ್ಪ, ಸುಭಾಷ್ ಅಸ್ಕಿಹಾಳ್, ಜಿ.ಎಂ. ವೀರೇಶ್, ಭೀಮ್ ರಾಜ್, ಜೆ.ಎಂ. ಮೌನೇಶ್, ರಾಘವೇಂದ್ರ ಬೋರೆಡ್ಡಿ, ಶರಣಪ್ಪ ನಾಮಾಲಿ, ಸಂಪತ್ ಕುಮಾರ್ ಉಟಕೂರ್ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ವಕೀಲರ ಮೇಲಿನ ಹಲ್ಲೆ, ದೌರ್ಜನ್ಯ ಖಂಡಿಸಿ ದೇವದುರ್ಗದಲ್ಲಿ ನ್ಯಾಯಾಲಯ ಕಲಾಪ ಬಹಿಷ್ಕಾರ



ದೇವದುರ್ಗ, ನ.3: ರಾಜ್ಯದ ವಿವಿಧೆಡೆ ವಕೀಲರ ಮೇಲೆ ನಡೆಯುತ್ತಿರುವ ಹತ್ಯೆ, ಹಲ್ಲೆ ಹಾಗೂ ದೌರ್ಜನ್ಯ ಪ್ರಕರಣಗಳನ್ನು ಖಂಡಿಸಿ, ವಕೀಲರಿಗೆ ಸೂಕ್ತ ರಕ್ಷಣೆ ಒದಗಿಸುವಂತೆ ಆಗ್ರಹಿಸಿ ದೇವದುರ್ಗ ತಾಲೂಕು ವಕೀಲರ ಸಂಘದ ವತಿಯಿಂದ ಮಂಗಳವಾರ ನ್ಯಾಯಾಲಯದ ಕಲಾಪಗಳನ್ನು ಬಹಿಷ್ಕರಿಸಿ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ನ್ಯಾಯಾಲಯದ ಆವರಣದ ಮುಂಭಾಗ ಜಮಾಯಿಸಿದ ವಕೀಲರು, ರಾಜ್ಯಾದ್ಯಂತ ವಕೀಲರ ಸುರಕ್ಷತೆಗಾಗಿ ನಡೆಯುತ್ತಿರುವ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿದರು. ವಕೀಲರ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ವಕೀಲರ ಸಂಘದ ಅಧ್ಯಕ್ಷ ಎಂ. ಮೌನೇಶ್ವರ ಹಾಗೂ ಹಿರಿಯ ನ್ಯಾಯವಾದಿ ವೇಣುಗೋಪಾಲಗೌಡ ಪಾಟೀಲ ಜಾಲಹಳ್ಳಿ, ನ್ಯಾಯಾಂಗ ವ್ಯವಸ್ಥೆಯಲ್ಲಿ ವಕೀಲರು ಪ್ರಮುಖ ಪಾತ್ರ ವಹಿಸುತ್ತಿದ್ದು, ಜನಸಾಮಾನ್ಯರಿಗೆ ನ್ಯಾಯ ದೊರಕಿಸಿಕೊಡುವ ನಿಟ್ಟಿನಲ್ಲಿ ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಆದರೆ, ಇತ್ತೀಚಿನ ದಿನಗಳಲ್ಲಿ ವಕೀಲರ ಮೇಲೆ ಹಲ್ಲೆ, ಬೆದರಿಕೆ ಹಾಗೂ ದೌರ್ಜನ್ಯ ಪ್ರಕರಣಗಳು ನಡೆಯುತ್ತಿರುವುದು ವಕೀಲ ಸಮುದಾಯದಲ್ಲಿ ಆತಂಕ ಮೂಡಿಸಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಸಾರ್ವಜನಿಕರ ಹಕ್ಕುಗಳ ರಕ್ಷಣೆ ಹಾಗೂ ನ್ಯಾಯಕ್ಕಾಗಿಹೋರಾಡುವವಕೀಲರೇಅಸುರಕ್ಷಿತ ವಾತಾವರಣದಲ್ಲಿ ಕಾರ್ಯನಿರ್ವಹಿಸುವ ಪರಿಸ್ಥಿತಿ ನಿರ್ಮಾಣವಾಗಿರುವುದು ಗಂಭೀರ ವಿಚಾರವಾಗಿದೆ. ಇಂತಹ ಘಟನೆಗಳಿಂದ ವಕೀಲರು ನಿರ್ಭೀತಿಯಿಂದ ವೃತ್ತಿ ನಿರ್ವಹಿಸಲು ತೊಂದರೆಯಾಗುತ್ತಿದೆ. ವಕೀಲರ ಸುರಕ್ಷತೆಯನ್ನು ಖಚಿತಪಡಿಸುವ ನಿಟ್ಟಿನಲ್ಲಿ ಸರ್ಕಾರ ಸೂಕ್ತ ಕಾನೂನು ಕ್ರಮಗಳನ್ನು ಕೈಗೊಳ್ಳಬೇಕಾದ ಅಗತ್ಯವಿದೆ ಎಂದು ಹೇಳಿದರು.

ಸಾರ್ವಜನಿಕರ ವಿವಿಧ ಕೆಲಸಗಳ ನಿಮಿತ್ತ ಸರ್ಕಾರಿ ಕಚೇರಿಗಳಿಗೆ ಭೇಟಿ ನೀಡುವ ಸಂದರ್ಭಗಳಲ್ಲಿಯೂ ವಕೀಲರಿಗೆ ಅಧಿಕಾರಿಗಳು ಹಾಗೂ ಸಿಬ್ಬಂದಿಯಿಂದ ಸೂಕ್ತ ಗೌರವ ಮತ್ತು ಸ್ಪಂದನೆ ದೊರೆಯುತ್ತಿಲ್ಲ. ಕಾನೂನು ವೃತ್ತಿಯಲ್ಲಿ ತೊಡಗಿರುವವರೊಂದಿಗೆ ಗೌರವಯುತವಾಗಿ ವರ್ತಿಸುವುದರ ಜೊತೆಗೆ ಸಾರ್ವಜನಿಕ ಸಮಸ್ಯೆಗಳ ಪರಿಹಾರಕ್ಕೆ ಅಧಿಕಾರಿಗಳು ಸಹಕಾರ ನೀಡಬೇಕು ಎಂದು ಆಗ್ರಹಿಸಿದರು.

ವಕೀಲರ ಮೇಲಿನ ಹಲ್ಲೆ ಮತ್ತು ದೌರ್ಜನ್ಯ ಪ್ರಕರಣಗಳಲ್ಲಿ ಭಾಗಿಯಾದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಇಂತಹ ಘಟನೆಗಳು ಮರುಕಳಿಸದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಬೇಕು. ವಕೀಲರು ಯಾವುದೇ ಭಯ ಹಾಗೂ ಒತ್ತಡವಿಲ್ಲದೆ ವೃತ್ತಿ ನಿರ್ವಹಿಸಲು ಅಗತ್ಯ ಭದ್ರತೆ ಒದಗಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯ ಅಂಗವಾಗಿ ನ್ಯಾಯಾಲಯದ ಕಲಾಪಗಳಿಂದ ದೂರ ಉಳಿದ ವಕೀಲರು, ತಮ್ಮ ಬೇಡಿಕೆಗಳನ್ನು ಒಳಗೊಂಡ ಮನವಿ ಪತ್ರವನ್ನು ತಹಶೀಲ್ದಾರ್ ಮೂಲಕ ರಾಜ್ಯದ ಮುಖ್ಯಮಂತ್ರಿಗಳಿಗೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ದೇವದುರ್ಗ ತಾಲೂಕು ವಕೀಲರ ಸಂಘದ ಪದಾಧಿಕಾರಿಗಳು ಹಾಗೂ ಹಿರಿಯ ಮತ್ತು ಕಿರಿಯ ವಕೀಲರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಬೀದಿಬದಿ ವ್ಯಾಪಾರಿಗಳ ಸಮಸ್ಯೆ ಪರಿಹಾರಕ್ಕೆ ಆಗ್ರಹಿಸಿ ಪುರಸಭೆಗೆ ಮನವಿ



ಲಿಂಗಸುಗೂರು, ನ.3: ಪಟ್ಟಣದ ಬೀದಿಬದಿ ವ್ಯಾಪಾರಿಗಳು ಎದುರಿಸುತ್ತಿರುವ ವಿವಿಧ ಸಮಸ್ಯೆಗಳನ್ನು ಪರಿಹರಿಸಿ, ವ್ಯಾಪಾರಿಗಳಿಗೆ ಅಗತ್ಯ ಮೂಲಸೌಕರ್ಯ ಹಾಗೂ ಸರ್ಕಾರದ ಸೌಲಭ್ಯಗಳನ್ನು ಒದಗಿಸುವುದರ ಜೊತೆಗೆ ಸಾರ್ವಜನಿಕರ ಸುರಕ್ಷತೆ ಮತ್ತು ಸುಗಮ ಸಂಚಾರಕ್ಕೆ ಸೂಕ್ತ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಕಲ್ಯಾಣ ಕರ್ನಾಟಕ ಬೀದಿಬದಿ ಮಾರಾಟಗಾರರ ಸಂಘದ (ಟಿಯುಸಿಐ) ಪದಾಧಿಕಾರಿಗಳು ಪುರಸಭೆ ಮುಖ್ಯಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಪಟ್ಟಣದಲ್ಲಿ ಬೀದಿಬದಿ ವ್ಯಾಪಾರಿಗಳು ಹಲವು ವರ್ಷಗಳಿಂದ ಸಣ್ಣಪುಟ್ಟ ವ್ಯಾಪಾರ ನಡೆಸುವ ಮೂಲಕ ಜೀವನೋಪಾಯ ಕಂಡುಕೊಂಡಿದ್ದಾರೆ. ಆದರೆ, ಸೂಕ್ತ ವ್ಯಾಪಾರ ಸ್ಥಳ, ಮೂಲಸೌಕರ್ಯ ಹಾಗೂ ಅಧಿಕೃತ ಗುರುತಿನ ಚೀಟಿಗಳ ಕೊರತೆಯಿಂದ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಪುರಸಭೆ ಆಡಳಿತವು ಬೀದಿಬದಿ ವ್ಯಾಪಾರಿಗಳ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಪುರಸಭೆ ಮುಂಭಾಗದ ರಸ್ತೆಯಲ್ಲಿ ವಾಹನಗಳು ವೇಗವಾಗಿ ಸಂಚರಿಸುತ್ತಿರುವುದರಿಂದ ಪಾದಚಾರಿಗಳು ಹಾಗೂ ವ್ಯಾಪಾರಿಗಳಿಗೆ ಅಪಾಯ ಎದುರಾಗುವ ಸಾಧ್ಯತೆಯಿದೆ. ಆದ್ದರಿಂದ ವಾಹನಗಳ ವೇಗ ನಿಯಂತ್ರಣಕ್ಕಾಗಿ ಅಗತ್ಯ ಸ್ಥಳಗಳಲ್ಲಿ ರಸ್ತೆ ಉಬ್ಬುಗಳನ್ನು (ಹಂಪ್ಸ್) ಅಳವಡಿಸಬೇಕು. ಪಟ್ಟಣದ ಉದ್ಯಾನವನದಲ್ಲಿರುವ ಒಣಗಿದ ಮರವನ್ನು ತೆರವುಗೊಳಿಸಿ ಸಾರ್ವಜನಿಕರಿಗೆ ಸಂಭವಿಸಬಹುದಾದ ಅಪಾಯವನ್ನು ತಪ್ಪಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಿದರು.

ಪಟ್ಟಣದ ಬಸ್ ನಿಲ್ದಾಣ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದ ಸುತ್ತಮುತ್ತ ಆಟೋರಿಕ್ಷಾಗಳು ಮತ್ತು ತಳ್ಳುವ ಬಂಡಿಗಳು ಅಸ್ತವ್ಯಸ್ತವಾಗಿ ನಿಲ್ಲುತ್ತಿರುವುದರಿಂದ ವಾಹನ ಸಂಚಾರ ಹಾಗೂ ಪಾದಚಾರಿಗಳ ಓಡಾಟಕ್ಕೆ ತೊಂದರೆಯಾಗುತ್ತಿದೆ. ಈ ಪ್ರದೇಶಗಳಲ್ಲಿ ಸಂಚಾರ ವ್ಯವಸ್ಥೆಯನ್ನು ಸುಗಮಗೊಳಿಸುವ ನಿಟ್ಟಿನಲ್ಲಿ ಆಟೋರಿಕ್ಷಾ ನಿಲುಗಡೆ ಹಾಗೂ ತಳ್ಳುವ ಬಂಡಿಗಳ ವ್ಯಾಪಾರಕ್ಕೆ ವ್ಯವಸ್ಥಿತ ಸ್ಥಳಾವಕಾಶ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಇದಲ್ಲದೆ, ಪಟ್ಟಣದ ವ್ಯಾಪ್ತಿಯಲ್ಲಿರುವ ಎಲ್ಲ ಬೀದಿಬದಿ ವ್ಯಾಪಾರಿಗಳ ಸಮಗ್ರ ಸಮೀಕ್ಷೆ ನಡೆಸಿ, ಅರ್ಹ ವ್ಯಾಪಾರಿಗಳಿಗೆ ಅಧಿಕೃತ ನೋಂದಣಿ ಹಾಗೂ ಗುರುತಿನ ಚೀಟಿಗಳನ್ನು ವಿತರಿಸಬೇಕು. ವ್ಯಾಪಾರ ನಡೆಸಲು ಸೂಕ್ತ ಸ್ಥಳಗಳನ್ನು ಗುರುತಿಸಿ ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕು. ಸರ್ಕಾರದಿಂದ ಬೀದಿಬದಿ ವ್ಯಾಪಾರಿಗಳಿಗಾಗಿ ಜಾರಿಯಲ್ಲಿರುವ ವಿವಿಧ ಕಲ್ಯಾಣ ಯೋಜನೆಗಳ ಪ್ರಯೋಜನ ಅರ್ಹ ಫಲಾನುಭವಿಗಳಿಗೆ ತಲುಪುವಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪುರಸಭೆ ಅಧಿಕಾರಿಗಳು ಸಂಬಂಧಪಟ್ಟ ಪ್ರದೇಶಗಳಿಗೆ ಖುದ್ದಾಗಿ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಬೇಕು. ವ್ಯಾಪಾರಿಗಳು ಹಾಗೂ ಸಾರ್ವಜನಿಕರು ಎದುರಿಸುತ್ತಿರುವ ಸಮಸ್ಯೆಗಳಿಗೆ ಆದ್ಯತೆ ಮೇರೆಗೆ ಸ್ಪಂದಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಂಘದ ಪದಾಧಿಕಾರಿಗಳು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಶರಣಪ್ಪ ಹುನಕುಂಟಿ, ಪ್ರಧಾನ ಕಾರ್ಯದರ್ಶಿ ಅಮರಯ್ಯ ಘಂಟಿ, ಸಂಘಟನಾ ಸಂಚಾಲಕ ಹಸ್ಮತ್, ಉಪಾಧ್ಯಕ್ಷರಾದ ಬಸವರಾಜ ತಾತ, ನಾಗೇಂದ್ರ ಭಜಂತ್ರಿ, ಮಹಾಂತೇಶ ಜಮಾದಾರ ಸೇರಿದಂತೆ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K